# ಮಾಹಿತಿ ಹಕ್ಕು ಅಧಿನಿಯಮ, 2005

(13.02.09ರ ಭಾರತ ವಿಶೇಷ ರಾಜಪತ್ರದ IXನೇ ಭಾಗದ 1ನೇ ವಿಭಾಗದ 39ನೇ ಸಂಪುಟದ 1ನೇ ಸಂಚಿಕೆಯಲ್ಲಿ 115 ರಿಂದ 140ರ ವರೆಗಿನ ಪುಟಗಳಲ್ಲಿ ಪ್ರಕಟವಾಗಿದೆ)

## ಪ್ರಕರಣಗಳ ಅನುಕ್ರಮಣಿಕೆ

## ಅಧ್ಯಾಯ – I

## ಪ್ರಾರಂಭಿಕ

**ಪ್ರಕರಣಗಳು:**


1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ

2. ಪರಿಭಾಷೆಗಳು


## ಅಧ್ಯಾಯ – II

## ಮಾಹಿತಿ ಹಕ್ಕು ಮತ್ತು ಸಾರ್ವಜನಿಕ ಪ್ರಾಧಿಕಾರಗಳ ಬಾಧ್ಯತೆಗಳು


3. ಮಾಹಿತಿ ಹಕ್ಕು

4. ಸಾರ್ವಜನಿಕ ಪ್ರಾಧಿಕಾರಗಳ ಬಾಧ್ಯತೆಗಳು

5. ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಪದನಾಮೀಕರಿಸುವುದು

6. ಮಾಹಿತಿ ಪಡೆಯುವುದಕ್ಕಾಗಿ ಕೋರಿಕೆ

7. ಕೋರಿಕೆಯ ವಿಲೆ

8. ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ವಿನಾಯಿತಿ

9. ಕೆಲವು ಸಂದರ್ಭಗಳಲ್ಲಿ ಮಾಹಿತಿ ಪಡೆಯುವ ಅವಕಾಶವನ್ನು ತಿರಸ್ಕರಿಸುವುದಕ್ಕೆ ಕಾರಣಗಳು

10. ಪ್ರತ್ಯೇಕಿಸುವಿಕೆ

11. ಮೂರನೇ ಪಕ್ಷಕಾರನ ಮಾಹಿತಿ


## ಅಧ್ಯಾಯ – III

## ಕೇಂದ್ರ ಮಾಹಿತಿ ಆಯೋಗ


12. ಕೇಂದ್ರ ಮಾಹಿತಿ ಆಯೋಗದ ರಚನೆ

13. ಪದಾವಧಿ ಮತ್ತು ಸೇವಾ ಷರತ್ತುಗಳು

14. ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ತೆಗೆದುಹಾಕುವುದು

## ಅಧ್ಯಾಯ – IV

### ರಾಜ್ಯ ಮಾಹಿತಿ ಆಯೋಗ

15. ರಾಜ್ಯ ಮಾಹಿತಿ ಆಯೋಗದ ರಚನೆ
16. ಪದಾವಧಿ ಮತ್ತು ಸೇವಾ ಷರತ್ತುಗಳು
17. ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತರನ್ನು ತೆಗೆದುಹಾಕುವುದು

## ಅಧ್ಯಾಯ - V

### ಮಾಹಿತಿ ಆಯೋಗಗಳ ಅಧಿಕಾರಗಳು ಮತ್ತು ಪ್ರಕಾರ್ಯಗಳು, ಅಪೀಲು ಮತ್ತು ದಂಡನೆಗಳು

18. ಮಾಹಿತಿ ಆಯೋಗಗಳ ಅಧಿಕಾರಗಳು ಮತ್ತು ಪ್ರಕಾರ್ಯಗಳು
19. ಅಪೀಲು
20. ದಂಡನೆಗಳು

## ಅಧ್ಯಾಯ – VI

### ಸಂಕೀರ್ಣ

21. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ
22. ಅಧಿನಿಯಮವು ಅಧ್ಯಾರೋಹಿ ಪರಿಣಾಮವನ್ನು ಹೊಂದಿರುವುದು
23. ನ್ಯಾಯಾಲಯಗಳ ಅಧಿಕಾರ ವ್ಯಾಪ್ತಿಯ ಪ್ರತಿಷೇಧ
24. ಅಧಿನಿಯಮವು ಕೆಲವು ಸಂಸ್ಥೆಗಳಿಗೆ ಅನ್ವಯಿಸದಿರುವುದು
25. ಮೇಲ್ವಿಚಾರಣೆ ಮಾಡುವುದು ಮತ್ತು ವರದಿ ಮಾಡುವುದು
26. ಸಮುಚಿತ ಸರ್ಕಾರವು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು
27. ನಿಯಮಗಳನ್ನು ರಚಿಸಲು ಸಮುಚಿತ ಸರ್ಕಾರದ ಅಧಿಕಾರ
28. ನಿಯಮಗಳನ್ನು ರಚಿಸಲು ಸಕ್ಷಮ ಪ್ರಾಧಿಕಾರದ ಅಧಿಕಾರ
29. ನಿಯಮಗಳನ್ನು ಇಡುವುದು
30. ತೊಂದರೆಗಳನ್ನು ನಿವಾರಿಸಲು ಅಧಿಕಾರ
31. ನಿರಸನ

**ಮೊದಲನೇ ಅನುಸೂಚಿ**

**ಎರಡನೇ ಅನುಸೂಚಿ**

# ಮಾಹಿತಿ ಹಕ್ಕು ಅಧಿನಿಯಮ, 2005

(2005ರ ಅಧಿನಿಯಮ ಸಂಖ್ಯೆ 22)

[15ನೇ ಜೂನ್, 2005]

ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆಯನ್ನು ಮತ್ತು ಉತ್ತರದಾಯಿತ್ವವನ್ನು ಹೆಚ್ಚಿಸುವ ದೃಷ್ಟಿಯಿಂದ ಸಾರ್ವಜನಿಕ ಪ್ರಾಧಿಕಾರಗಳ ನಿಯಂತ್ರಣದಲ್ಲಿರುವ ಮಾಹಿತಿಯನ್ನು ಪಡೆಯಲು ನಾಗರಿಕರಿಗೆ ಮಾಹಿತಿ ಪಡೆಯುವ ಹಕ್ಕಿನ ಕಾರ್ಯರೂಪದ ವ್ಯವಸ್ಥೆಯನ್ನು ರೂಪಿಸುವುದಕ್ಕೆ, ಕೇಂದ್ರ ಮಾಹಿತಿ ಆಯೋಗದ ರಚನೆಗೆ ಮತ್ತು ರಾಜ್ಯ ಮಾಹಿತಿ ಆಯೋಗಗಳ ರಚನೆಗೆ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸುವ ಅಧಿನಿಯಮ.

ಭಾರತ ಸಂವಿಧಾನವು ಪ್ರಜಾಸತ್ತಾತ್ಮಕ ಗಣರಾಜ್ಯವನ್ನು ಸ್ಥಾಪಿಸಿರುವುದರಿಂದ;

ಪ್ರಜಾಪ್ರಭುತ್ವದ ಕಾರ್ಯನಿರ್ವಹಣೆಗೆ ಹಾಗೂ ಭ್ರಷ್ಟಾಚಾರ ನಿಯಂತ್ರಣಕ್ಕೆ ಅತ್ಯಾವಶ್ಯವಾಗಿರುವ ಮತ್ತು ಸರ್ಕಾರಗಳು ಹಾಗೂ ಅವುಗಳ ಅಂಗಸಂಸ್ಥೆಗಳು ಜನರಿಗೆ ಉತ್ತರದಾಯಿಯಾಗಿರುವಂತೆ ಮಾಡಲು ಮಾಹಿತಿಯುಳ್ಳ ನಾಗರಿಕ ಸಮುದಾಯ ಮತ್ತು ಮಾಹಿತಿಯ ಪಾರದರ್ಶಕತೆಯು ಅತ್ಯಗತ್ಯವಾಗಿರುವುದರಿಂದ;

ಸದ್ಯದ ವಾಸ್ತವಿಕ ಪದ್ಧತಿಯಲ್ಲಿ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ, ಸರ್ಕಾರಗಳ ದಕ್ಷ ಕಾರ್ಯನಿರ್ವಹಣೆ, ಪರಿಮಿತ ವಿತ್ತೀಯ ಸಂಪನ್ಮೂಲಗಳನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳುವುದು ಮತ್ತು ಸೂಕ್ಷ್ಮಮಾಹಿತಿಯ ಗೌಪ್ಯತೆಯ ಸಂರಕ್ಷಣೆ ಒಳಗೊಂಡಂತೆ ಇತರ ಸಾರ್ವಜನಿಕ ಹಿತಾಸಕ್ತಿಗಳೊಂದಿಗೆ ವಿರೋಧ ಉಂಟಾಗುವ ಸಾಧ್ಯತೆ ಇರುವುದರಿಂದ;

ಪ್ರಜಾಸತ್ತಾತ್ಮಕ ಆದರ್ಶದ ಸಾರ್ವಭೌಮತೆಯನ್ನು ಸಂರಕ್ಷಿಸುವುದರ ಜೊತೆಗೆ ಪರಸ್ಪರ ವಿರೋಧವುಳ್ಳ ಹಿತಾಸಕ್ತಿಗಳ ನಡುವೆ ಹೊಂದಾಣಿಕೆ ಮೂಡಿಸುವುದು ಅವಶ್ಯವಾಗಿರುವುದರಿಂದ;

ಮಾಹಿತಿಯನ್ನು ಪಡೆಯಲಿಚ್ಛಿಸುವ ನಾಗರಿಕರಿಗೆ ಕೆಲವು ಮಾಹಿತಿಯನ್ನು ಒದಗಿಸುವುದಕ್ಕೆ ಉಪಬಂಧ ಕಲ್ಪಿಸುವುದು ಈಗ ವಿಹಿತವಾಗಿರುವುದರಿಂದ;

ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಸಂಸತ್ತಿನಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:–

## ಅಧ್ಯಾಯ - I

### ಪ್ರಾರಂಭಿಕ

**1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಮಾಹಿತಿ ಹಕ್ಕು ಅಧಿನಿಯಮ, 2005 ಎಂದು ಕರೆಯತಕ್ಕದ್ದು.

(2) ಇದು ಜಮ್ಮು ಮತ್ತು ಕಾಶ್ಮೀರ ರಾಜ್ಯವನ್ನು ಹೊರತುಪಡಿಸಿ ಇಡೀ ಭಾರತಕ್ಕೆ ವ್ಯಾಪ್ತವಾಗತಕ್ಕದ್ದು.

(3) ಈ ಅಧಿನಿಯಮದ 4ನೇ ಪ್ರಕರಣದ (1)ನೇ ಉಪ ಪ್ರಕರಣ, 5ನೇ ಪ್ರಕರಣದ (1) ಮತ್ತು (2)ನೇ ಉಪ ಪ್ರಕರಣಗಳು, 12, 13, 15, 16, 24, 27 ಮತ್ತು 28ನೇ ಪ್ರಕರಣಗಳ ಉಪಬಂಧಗಳು ಕೂಡಲೇ ಜಾರಿಗೆ ಬರತಕ್ಕದ್ದು ಮತ್ತು ಉಳಿದ ಉಪಬಂಧಗಳು ಇದನ್ನು ಅಧಿನಿಯಮಿತಿಗೊಳಿಸಿದ ಒಂದುನೂರ ಇಪ್ಪತ್ತನೇ ದಿನದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) ಸಾರ್ವಜನಿಕ ಪ್ರಾಧಿಕಾರಕ್ಕೆ ಸಂಬಂಧಪಟ್ಟಂತೆ, "ಸಮುಚಿತ ಸರ್ಕಾರ" ಎಂದರೆ,–

(i) ಕೇಂದ್ರ ಸರ್ಕಾರದಿಂದ ಅಥವಾ ಒಕ್ಕೂಟ ರಾಜ್ಯಕ್ಷೇತ್ರದ ಆಡಳಿತದಿಂದ ಸ್ಥಾಪಿತವಾದ, ರಚಿತವಾದ, ಅದರ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟಿರುವ ಅಥವಾ ಕೇಂದ್ರ ಸರ್ಕಾರವು ಅಥವಾ ಒಕ್ಕೂಟ ರಾಜ್ಯಕ್ಷೇತ್ರದ ಆಡಳಿತವು ನೇರವಾಗಿ ಅಥವಾ ಪರೋಕ್ಷವಾಗಿ ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ, ಕೇಂದ್ರ ಸರ್ಕಾರ ಎಂದು ಅರ್ಥ;

(ii) ರಾಜ್ಯ ಸರ್ಕಾರದಿಂದ ಸ್ಥಾಪಿತವಾದ, ರಚಿತವಾದ ಅಥವಾ ಅದರ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟಿರುವ ಅಥವಾ ರಾಜ್ಯ ಸರ್ಕಾರವು ನೇರವಾಗಿ ಅಥವಾ ಪರೋಕ್ಷವಾಗಿ ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದಿರುವ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ, ರಾಜ್ಯ ಸರ್ಕಾರ ಎಂದು ಅರ್ಥ;

(ಬಿ) "ಕೇಂದ್ರ ಮಾಹಿತಿ ಆಯೋಗ" ಎಂದರೆ 12ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ರಚಿತವಾದ ಕೇಂದ್ರ ಮಾಹಿತಿ ಆಯೋಗ ಎಂದು ಅರ್ಥ;

(ಸಿ) "ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದರೆ, 5ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಹಾಗೆ ಪದನಾಮೀಕರಿಸಲಾದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಎಂದು ಅರ್ಥ ಮತ್ತು ಇದು (2)ನೇ ಉಪಪ್ರಕರಣದ ಅಡಿಯಲ್ಲಿ ಪದನಾಮೀಕರಿಸಲಾದ ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ;

(ಡಿ) "ಮುಖ್ಯ ಮಾಹಿತಿ ಆಯುಕ್ತ" ಮತ್ತು "ಮಾಹಿತಿ ಆಯುಕ್ತ" ಎಂದರೆ 12ನೇ ಪ್ರಕರಣದ (3)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡ ಮುಖ್ಯ ಮಾಹಿತಿ ಆಯುಕ್ತ ಮತ್ತು ಮಾಹಿತಿ ಆಯುಕ್ತ ಎಂದು ಅರ್ಥ;

(ಇ) "ಸಕ್ಷಮ ಪ್ರಾಧಿಕಾರಿ" ಎಂದರೆ,–

(i) ಲೋಕ ಸಭೆ ಅಥವಾ ರಾಜ್ಯದ ವಿಧಾನ ಸಭೆ ಅಥವಾ ಅಂತಹ ವಿಧಾನ ಸಭೆಯನ್ನು ಹೊಂದಿರುವ ಒಕ್ಕೂಟ ರಾಜ್ಯಕ್ಷೇತ್ರದ ವಿಧಾನ ಸಭೆಯ ಸಂದರ್ಭದಲ್ಲಿ ಸಭಾಧ್ಯಕ್ಷ ಮತ್ತು ರಾಜ್ಯ ಸಭೆ ಅಥವಾ ರಾಜ್ಯಗಳ ವಿಧಾನ ಪರಿಷತ್ತುಗಳ ಸಂದರ್ಭದಲ್ಲಿ ಸಭಾಪತಿ ಎಂದು ಅರ್ಥ;

(ii) ಸರ್ವೋಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ ಎಂದು ಅರ್ಥ;

(iii) ಉಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಎಂದು ಅರ್ಥ;

(iv) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ಅಥವಾ ರಚಿತವಾದ ಇತರ ಪ್ರಾಧಿಕಾರಗಳ ಸಂದರ್ಭದಲ್ಲಿ ರಾಷ್ಟ್ರಪತಿ ಅಥವಾ ಸಂದರ್ಭಾನುಸಾರ, ರಾಜ್ಯಪಾಲ ಎಂದು ಅರ್ಥ;

(v) ಸಂವಿಧಾನದ 239ನೇ ಅನುಚ್ಛೇಧದ ಅಡಿಯಲ್ಲಿ ನೇಮಕಗೊಂಡ ಆಡಳಿತಗಾರ ಎಂದು ಅರ್ಥ;

(ಎಫ್) "ಮಾಹಿತಿ" ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಅಡಿಯಲ್ಲಿ ಸಾರ್ವಜನಿಕ ಪ್ರಾಧಿಕಾರದಿಂದ ಪಡೆಯಬಹುದಾದ ದಾಖಲೆಗಳು, ದಸ್ತಾವೇಜುಗಳು, ಮೆಮೋಗಳು, ಇ–ಮೇಲ್‍ಗಳು, ಅಭಿಪ್ರಾಯಗಳು, ಸಲಹೆಗಳು, ಪತ್ರಿಕಾ ಹೇಳಿಕೆಗಳು, ಸುತ್ತೋಲೆಗಳು, ಆದೇಶಗಳು, ಲಾಗ್ ಪುಸ್ತಕಗಳು, ಕರಾರುಗಳು, ವರದಿಗಳು, ಕಾಗದಪತ್ರಗಳು, ನಮೂನೆಗಳು, ಮಾದರಿಗಳು, ಯಾವುದೇ ವಿದ್ಯುನ್ಮಾನ ರೂಪದಲ್ಲಿ ಹೊಂದಿರುವ ದತ್ತಾಂಶ ಮತ್ತು ಯಾವುದೇ ಖಾಸಗಿ ನಿಕಾಯಕ್ಕೆ ಸಂಬಂಧಿಸಿದ ಮಾಹಿತಿ ಒಳಗೊಂಡಂತೆ ಯಾವುದೇ ರೂಪದಲ್ಲಿರುವ ಯಾವುದೇ ವಿಷಯ ಎಂದು ಅರ್ಥ;

(ಜಿ) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ಸಮುಚಿತ ಸರ್ಕಾರವು ಅಥವಾ ಸಂದರ್ಭಾನುಸಾರ, ಸಕ್ಷಮ ಪ್ರಾಧಿಕಾರವು ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು ಎಂದು ಅರ್ಥ;

(ಹೆಚ್) "ಸಾರ್ವಜನಿಕ ಪ್ರಾಧಿಕಾರ" ಎಂದರೆ,–

(ಎ) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ;

(ಬಿ) ಸಂಸತ್ತು ಮಾಡಿದ ಯಾವುದೇ ಇತರ ಕಾನೂನಿನ ಮೂಲಕ;

(ಸಿ) ರಾಜ್ಯ ವಿಧಾನ ಮಂಡಲವು ಮಾಡಿದ ಯಾವುದೇ ಇತರ ಕಾನೂನಿನ ಮೂಲಕ;

(ಡಿ) ಸಮುಚಿತ ಸರ್ಕಾರವು ಹೊರಡಿಸಿದ ಅಧಿಸೂಚನೆ ಅಥವಾ ಮಾಡಿದ ಆದೇಶದ ಮೂಲಕ

– ಸ್ಥಾಪಿತವಾದ ಅಥವಾ ರಚಿತವಾದ ಯಾವುದೇ ಪ್ರಾಧಿಕಾರ ಅಥವಾ ನಿಕಾಯ ಅಥವಾ ಸ್ವಯಂ ಆಡಳಿತ ಸಂಸ್ಥೆ ಎಂದು ಅರ್ಥ ಮತ್ತು ಇದು,–

(i) ಸಮುಚಿತ ಸರ್ಕಾರದ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟ ಅಥವಾ ಅಂಥ ಸರ್ಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣದ ಹಣಕಾಸು ನೆರವು ಪಡೆಯುವ ಯಾವುದೇ ನಿಕಾಯವನ್ನು;

(ii) ಸಮುಚಿತ ಸರ್ಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣದ ಹಣಕಾಸು ನೆರವು ಪಡೆಯುವ ಸರ್ಕಾರೇತರ ಸಂಸ್ಥೆಯನ್ನು

– ಒಳಗೊಳ್ಳುತ್ತದೆ.

(ಐ) "ದಾಖಲೆ"ಯು,–

(ಎ) ಯಾವುದೇ ದಸ್ತಾವೇಜು, ಹಸ್ತಪ್ರತಿ ಮತ್ತು ಕಡತವನ್ನು;

(ಬಿ) ಯಾವುದೇ ದಸ್ತಾವೇಜಿನ ಮೈಕ್ರೋಫಿಲಂ, ಮೈಕ್ರೋಫಿಷ್ ಮತ್ತು ಪಡಿಯಚ್ಚು ಪ್ರತಿಯನ್ನು;

(ಸಿ) ಅಂತಹ ಮೈಕ್ರೋಫಿಲಂನಲ್ಲಿ (ಗಾತ್ರವನ್ನು ವಿಸ್ತರಿಸಿರಲಿ ಅಥವಾ ವಿಸ್ತರಿಸದಿರಲಿ) ಒಳಗೊಂಡ ಪ್ರತಿರೂಪ ಅಥವಾ ಪ್ರತಿರೂಪಗಳ ಮರು ಪ್ರತಿ ಮಾಡುವುದನ್ನು; ಮತ್ತು

(ಡಿ) ಗಣಕಯಂತ್ರ ಅಥವಾ ಯಾವುದೇ ಇತರ ಸಾಧನದ ಮೂಲಕ ಸಿದ್ಧಪಡಿಸಲಾದ ಯಾವುದೇ ಇತರ ವಿಷಯವನ್ನು

– ಒಳಗೊಳ್ಳುತ್ತದೆ.

(ಜೆ) "ಮಾಹಿತಿ ಹಕ್ಕು" ಎಂದರೆ ಯಾವುದೇ ಸಾರ್ವಜನಿಕ ಪ್ರಾಧಿಕಾರವು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ, ಈ ಅಧಿನಿಯಮದ ಅಡಿಯಲ್ಲಿ ಪಡೆಯಬಹುದಾದ ಮಾಹಿತಿ ಹಕ್ಕು ಎಂದು ಅರ್ಥ ಮತ್ತು ಇದರಲ್ಲಿ,–

(i) ಕೆಲಸದ, ದಸ್ತಾವೇಜುಗಳ, ದಾಖಲೆಗಳ ಪರಿವೀಕ್ಷಣೆ ಮಾಡುವ;

(ii) ದಸ್ತಾವೇಜುಗಳ ಅಥವಾ ದಾಖಲೆಗಳ ಟಿಪ್ಪಣಿಗಳನ್ನು, ಉದ್ಧೃತ ಭಾಗಗಳನ್ನು ಅಥವಾ ಪ್ರಮಾಣೀಕೃತ ಪ್ರತಿಗಳನ್ನು ತೆಗೆದುಕೊಳ್ಳುವ;

(iii) ವಿಷಯದ ಪ್ರಮಾಣೀಕೃತ ಮಾದರಿಗಳನ್ನು ತೆಗೆದುಕೊಳ್ಳುವ;

(iv) ಗಣಕಯಂತ್ರದಲ್ಲಿ ಅಥವಾ ಯಾವುದೇ ಇತರ ಸಾಧನದಲ್ಲಿ ಸಂಗ್ರಹಿಸಿಟ್ಟ ಮಾಹಿತಿಯನ್ನು ಡಿಸ್ಕೆಟ್‌ಗಳ, ಫ್ಲಾಪಿಗಳ, ಟೇಪುಗಳ, ವಿಡಿಯೋ ಕ್ಯಾಸೆಟ್‌ಗಳ ರೂಪದಲ್ಲಿ ಅಥವಾ ಯಾವುದೇ ಇತರ ವಿದ್ಯುನ್ಮಾನ ವಿಧಾನದಲ್ಲಿ ಅಥವಾ ಅದರ ಮುದ್ರಿತ ಪ್ರತಿಯ ಮೂಲಕ ಮಾಹಿತಿ ಪಡೆಯುವ

– ಹಕ್ಕು ಒಳಗೊಂಡಿರುತ್ತದೆ.

(ಕೆ) "ರಾಜ್ಯ ಮಾಹಿತಿ ಆಯೋಗ" ಎಂದರೆ 15ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ರಚಿತವಾದ ರಾಜ್ಯ ಮಾಹಿತಿ ಆಯೋಗ ಎಂದು ಅರ್ಥ;

(ಎಲ್) "ರಾಜ್ಯ ಮುಖ್ಯ ಮಾಹಿತಿ ಆಯುಕ್ತ" ಮತ್ತು "ರಾಜ್ಯ ಮಾಹಿತಿ ಆಯುಕ್ತ" ಎಂದರೆ 15ನೇ ಪ್ರಕರಣದ (3)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡಿರುವ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತ ಎಂದು ಅರ್ಥ;

(ಎಂ) "ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದರೆ 5ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಪದನಾಮೀಕರಿಸಲಾದ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಎಂದು ಅರ್ಥ ಮತ್ತು ಅದು (2)ನೇ ಉಪಪ್ರಕರಣದ ಅಡಿಯಲ್ಲಿ ಹಾಗೆ ಪದನಾಮೀಕರಿಸಲಾದ ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ;

(ಎನ್) "ಮೂರನೇ ಪಕ್ಷಕಾರ" ಎಂದರೆ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ನಾಗರಿಕನನ್ನು ಹೊರತುಪಡಿಸಿದ ವ್ಯಕ್ತಿ ಎಂದು ಆರ್ಥ ಮತ್ತು ಅದು ಸಾರ್ವಜನಿಕ ಪ್ರಾಧಿಕಾರವನ್ನು ಒಳಗೊಳ್ಳುತ್ತದೆ.

## ಅಧ್ಯಾಯ – II

## ಮಾಹಿತಿ ಹಕ್ಕು ಮತ್ತು ಸಾರ್ವಜನಿಕ ಪ್ರಾಧಿಕಾರಗಳ ಬಾಧ್ಯತೆಗಳು

**3. ಮಾಹಿತಿ ಹಕ್ಕು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಎಲ್ಲ ನಾಗರಿಕರು ಮಾಹಿತಿ ಪಡೆಯುವ ಹಕ್ಕನ್ನು ಹೊಂದಿರತಕ್ಕದ್ದು.

**4. ಸಾರ್ವಜನಿಕ ಪ್ರಾಧಿಕಾರಗಳ ಬಾಧ್ಯತೆಗಳು.–** (1) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು,–

(ಎ) ಈ ಅಧಿನಿಯಮದ ಅಡಿಯಲ್ಲಿ ಮಾಹಿತಿ ಪಡೆಯುವ ಹಕ್ಕಿಗಾಗಿ ಅನುಕೂಲ ಮಾಡಿಕೊಡುವ ರೀತಿಯಲ್ಲಿ ಮತ್ತು ನಮೂನೆಯಲ್ಲಿ ಕ್ರಮಬದ್ಧವಾದ ವಿಷಯಪಟ್ಟಿ ಮತ್ತು ಸೂಚಿಪಟ್ಟಿಯನ್ನೊಳಗೊಂಡ ಅದರ ಎಲ್ಲಾ ದಾಖಲೆಗಳನ್ನು ನಿರ್ವಹಿಸತಕ್ಕದ್ದು ಮತ್ತು ಸೂಕ್ತ ಸಮಯದೊಳಗಾಗಿ ಮತ್ತು ಸಂಪನ್ಮೂಲಗಳ ಲಭ್ಯತೆಗೊಳಪಟ್ಟು, ಗಣಕೀಕರಣಕ್ಕೆ ಸೂಕ್ತವಾದ ಎಲ್ಲ ದಾಖಲೆಗಳನ್ನು ಗಣಕೀಕರಿಸಿರುವುದನ್ನು ಮತ್ತು ಅಂತಹ ದಾಖಲೆಗಳು ಸುಲಭವಾಗಿ ದೊರೆಯುವಂತೆ ಮಾಡಲು ದೇಶಾದ್ಯಂತ ವಿವಿಧ ಸಿಸ್ಟಂಗಳಲ್ಲಿ ಸಂಪರ್ಕ ಜಾಲದ ಮೂಲಕ ಸಂಪರ್ಕ ಕಲ್ಪಿಸುವುದನ್ನು ಸುನಿಶ್ಚಿತಪಡಿಸಿಕೊಳ್ಳತಕ್ಕದ್ದು;

(ಬಿ) ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ಒಂದುನೂರ ಇಪ್ಪತ್ತು ದಿನಗಳೊಳಗಾಗಿ,–

(i) ಅದರ ರಚನೆ, ಕಾರ್ಯಗಳು ಮತ್ತು ಕರ್ತವ್ಯಗಳ ವಿವರಗಳನ್ನು;

(ii) ಅದರ ಅಧಿಕಾರಿಗಳ ಮತ್ತು ನೌಕರರ ಅಧಿಕಾರಗಳನ್ನು ಮತ್ತು ಕರ್ತವ್ಯಗಳನ್ನು;

(iii) ಮೇಲ್ವಿಚಾರಣೆ ಮಾರ್ಗಗಳು ಮತ್ತು ಉತ್ತರದಾಯಿತ್ವವೂ ಸೇರಿದಂತೆ ತೀರ್ಮಾನ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕಾರ್ಯವಿಧಾನವನ್ನು;

(iv) ಅದರ ಕಾರ್ಯಗಳ ನಿರ್ವಹಣೆಗೆ ಅದು ರೂಪಿಸಿರುವ ಸೂತ್ರಗಳನ್ನು;

(v) ಅದರ ಕಾರ್ಯಗಳನ್ನು ನೆರವೇರಿಸುವುದಕ್ಕಾಗಿ ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ಅಥವಾ ಅದರ ಉದ್ಯೋಗಿಗಳು ಬಳಸುವ ನಿಯಮಗಳನ್ನು, ವಿನಿಯಮನಗಳನ್ನು, ಸೂಚನೆಗಳನ್ನು, ಕೈಪಿಡಿಗಳನ್ನು ಮತ್ತು ದಾಖಲೆಗಳನ್ನು;

(vi) ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ವಿವರಪಟ್ಟಿಕೆಯನ್ನು;

(vii) ಅದರ ಕಾರ್ಯನೀತಿಯನ್ನು ರೂಪಿಸುವುದು ಅಥವಾ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯವಿರುವಂತೆ ಮಾಡಲು ಇರುವಂಥ ಯಾವುದೇ ವ್ಯವಸ್ಥೆಯ ವಿವರಗಳನ್ನು;

(viii) ಮಂಡಳಿಗಳ, ಪರಿಷತ್ತುಗಳ, ಸಮಿತಿಗಳ ಮತ್ತು ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳನ್ನೊಳಗೊಂಡ ಅದರ ಭಾಗವಾಗಿ ಅಥವಾ ಅದರ ಸಲಹೆಯ ಉದ್ದೇಶಕ್ಕಾಗಿ ರಚಿತವಾದ ಇತರ ನಿಕಾಯಗಳ ಹೇಳಿಕೆ ಮತ್ತು ಆ ಮಂಡಳಿಗಳ, ಪರಿಷತ್ತುಗಳ, ಸಮಿತಿಗಳ ಮತ್ತು ಇತರ ನಿಕಾಯಗಳ ಸಭೆಗಳ ನಡಾವಳಿಗಳು ಸಾರ್ವಜನಿಕರಿಗೆ ದೊರೆಯುತ್ತಿವೆಯೇ ಎಂಬುದನ್ನು;

(ix) ಅದರ ಅಧಿಕಾರಿಗಳ ಮತ್ತು ನೌಕರರ ವಿವರ ಸೂಚಿ ಪುಸ್ತಕವನ್ನು;

(x) ಅದರ ವಿನಿಯಮನಗಳಲ್ಲಿ ಉಪಬಂಧಿಸಿರುವಂತೆ ಪರಿಹಾರದ ವ್ಯವಸ್ಥೆಯೂ ಸೇರಿದಂತೆ ಅದರ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರರು ಪಡೆಯುವ ಮಾಸಿಕ ಸಂಭಾವನೆಯನ್ನು;

(xi) ಎಲ್ಲ ಯೋಜನೆಗಳ ಪ್ರಸ್ತಾವಿತ ವೆಚ್ಚಗಳ ವಿವರಗಳನ್ನು ಸೂಚಿಸಿ ಅದರ ಪ್ರತಿಯೊಂದು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯ ಪತ್ರವನ್ನು ಮತ್ತು ಮಾಡಲಾದ ಬಟವಾಡೆಗಳ ವರದಿಗಳನ್ನು;

(xii) ಹಂಚಿಕೆ ಮಾಡಲಾದ ಮೊಬಲಗನ್ನೊಳಗೊಂಡು, ಸಹಾಯಧನ ಕಾರ್ಯಕ್ರಮಗಳ ಜಾರಿಯ ವಿಧಾನವನ್ನು ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳನ್ನು;

(xiii) ಅದು ನೀಡಿರುವ ರಿಯಾಯಿತಿಗಳನ್ನು, ಅನುಮತಿ ಪತ್ರಗಳನ್ನು ಅಥವಾ ಅಧಿಕಾರಪತ್ರಗಳನ್ನು ಪಡೆಯುವವರ ವಿವರಗಳನ್ನು;

(xiv) ಅದಕ್ಕೆ ಲಭ್ಯವಾಗುವ ಅಥವಾ ಅದು ಹೊಂದಿರುವ ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ ಮಾಹಿತಿಗೆ ಸಂಬಂಧಿಸಿದ ವಿವರಗಳನ್ನು;

(xv) ಸಾರ್ವಜನಿಕ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿದ್ದರೆ ಅದರ ಕೆಲಸದ ಸಮಯವನ್ನು ಒಳಗೊಂಡಂತೆ ಮಾಹಿತಿ ಪಡೆಯಲು ಸಾರ್ವಜನಿಕರಿಗೆ ಲಭ್ಯವಿರುವ ಸೌಲಭ್ಯಗಳ ವಿವರಗಳನ್ನು;

(xvi) ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರುಗಳನ್ನು, ಪದನಾಮಗಳನ್ನು ಮತ್ತು ಇತರ ವಿವರಗಳನ್ನು;

(xvii) ನಿಯಮಿಸಬಹುದಾದಂತಹ ಇತರ ಮಾಹಿತಿಯನ್ನು

– ಪ್ರಕಟಿಸತಕ್ಕದ್ದು ಮತ್ತು ಆ ತರುವಾಯ ಪ್ರತಿವರ್ಷ ಈ ಪ್ರಕಟಣೆಗಳನ್ನು ತಹಲ್‌ವರೆಗೆ ಪರಿಷ್ಕರಿಸತಕ್ಕದ್ದು.

(ಸಿ) ಸಾರ್ವಜನಿಕರಿಗೆ ಸಂಬಂಧಿಸಿದ ಪ್ರಮುಖ ಕಾರ್ಯನೀತಿಗಳನ್ನು ರೂಪಿಸುವಾಗ ಅಥವಾ ನಿರ್ಧಾರಗಳನ್ನು ಘೋಷಿಸುವಾಗ ಎಲ್ಲ ಸಂಬಂಧಪಟ್ಟ ಸಂಗತಿಗಳನ್ನು ಪ್ರಕಟಿಸತಕ್ಕದ್ದು;

(ಡಿ) ಆಡಳಿತಾತ್ಮಕ ಅಥವಾ ಅರೆನ್ಯಾಯಿಕ ಸ್ವರೂಪದ ನಿರ್ಣಯಗಳಿಂದ ಬಾಧಿತ ವ್ಯಕ್ತಿಗಳಿಗೆ ಆ ನಿರ್ಣಯಗಳ ಕಾರಣಗಳನ್ನು ಒದಗಿಸತಕ್ಕದ್ದು.

(2) ಮಾಹಿತಿ ಪಡೆಯುವುದಕ್ಕಾಗಿ, ಈ ಅಧಿನಿಯಮದ ಉಪಯೋಗವನ್ನು ಕನಿಷ್ಠ ಪ್ರಮಾಣದಲ್ಲಿ ಅವಲಂಬಿಸುವುದಕ್ಕಾಗಿ ಅಂತರ್ಜಾಲವೂ ಸೇರಿದಂತೆ, ವಿವಿಧ ಸಂಪರ್ಕ ಸಾಧನಗಳ ಮೂಲಕ ನಿಯಮಿತ ಮಧ್ಯಂತರದಲ್ಲಿ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು (1)ನೇ ಉಪಪ್ರಕರಣದ (ಬಿ) ಖಂಡದ ಅಗತ್ಯತೆಗೆ ಅನುಸಾರವಾಗಿ ಸಾರ್ವಜನಿಕರಿಗೆ ಸಾಕಷ್ಟು ಮಾಹಿತಿಯನ್ನು ತಾನಾಗಿಯೇ ಒದಗಿಸಲು ಕ್ರಮ ತೆಗೆದುಕೊಳ್ಳುವುದು ಅದರ ನಿರಂತರ ಪ್ರಯತ್ನವಾಗಿರತಕ್ಕದ್ದು.

(3) (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ಪ್ರತಿಯೊಂದು ಮಾಹಿತಿಯನ್ನು, ಸಾರ್ವಜನಿಕರಿಗೆ ಸುಲಭವಾಗಿ ದೊರೆಯುವಂತಹ ರೂಪದಲ್ಲಿ ಮತ್ತು ರೀತಿಯಲ್ಲಿ ವ್ಯಾಪಕವಾಗಿ ಪ್ರಸಾರ ಮಾಡತಕ್ಕದ್ದು.

(4) ವೆಚ್ಚದ ಪರಿಣಾಮವನ್ನು, ಸ್ಥಳೀಯ ಭಾಷೆಯನ್ನು ಮತ್ತು ಆ ಸ್ಥಳೀಯ ಪ್ರದೇಶದಲ್ಲಿನ ಸಂಪರ್ಕದ ಅತ್ಯಂತ ಪರಿಣಾಮಕಾರಿ ವಿಧಾನ ಇವುಗಳನ್ನು ಗಮನದಲ್ಲಿಟ್ಟುಕೊಂಡು ಎಲ್ಲ ವಿಷಯಗಳನ್ನು ಪ್ರಸಾರ ಮಾಡತಕ್ಕದ್ದು ಮತ್ತು ಆ ಮಾಹಿತಿಯು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಬಳಿ ಸಾಧ್ಯವಾದಷ್ಟುಮಟ್ಟಿಗೆ ವಿದ್ಯುನ್ಮಾನ ನಮೂನೆಯಲ್ಲಿ ಸುಲಭವಾಗಿ, ಉಚಿತವಾಗಿ ಅಥವಾ ನಿಯಮಿಸಬಹುದಾದಂತಹ ಮಾಧ್ಯಮ ವೆಚ್ಚದಲ್ಲಿ ಅಥವಾ ಮುದ್ರಣ ವೆಚ್ಚದ ಬೆಲೆಯಲ್ಲಿ ಲಭ್ಯವಾಗುವಂತಿರತಕ್ಕದ್ದು.

**ವಿವರಣೆ:–** (3) ಮತ್ತು (4)ನೇ ಉಪ ಪ್ರಕರಣಗಳ ಉದ್ದೇಶಗಳಿಗಾಗಿ "ಪ್ರಸಾರ ಮಾಡಲಾದ" ಎಂದರೆ ಯಾವುದೇ ಸಾರ್ವಜನಿಕ ಪ್ರಾಧಿಕಾರದ ಕಚೇರಿಗಳ ಪರಿಶೀಲನೆಯು ಒಳಗೊಂಡಂತೆ ಮಾಹಿತಿಯನ್ನು ಸೂಚನಾ ಫಲಕಗಳು, ವೃತ್ತ ಪತ್ರಿಕೆಗಳು, ಸಾರ್ವಜನಿಕ ಪ್ರಕಟಣೆಗಳು, ಮಾಧ್ಯಮ ಪ್ರಸಾರಗಳ ಮೂಲಕ, ಅಂತರ್ಜಾಲ ಅಥವಾ ಯಾವುದೇ ಇತರ ಸಾಧನಗಳ ಮೂಲಕ ಸಾರ್ವಜನಿಕರಿಗೆ ತಿಳಿಯುವಂತೆ ಮಾಡುವುದು ಅಥವಾ ತಿಳಿಸುವುದು ಎಂದು ಅರ್ಥ.

**5. ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಪದನಾಮೀಕರಿಸುವುದು.–** (1) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು, ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ನೂರು ದಿನಗಳೊಳಗಾಗಿ, ಈ ಅಧಿನಿಯಮದ ಅಡಿಯಲ್ಲಿ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ವ್ಯಕ್ತಿಗಳಿಗೆ ಮಾಹಿತಿ ಒದಗಿಸಲು, ಅದರ ಅಧೀನದಲ್ಲಿರುವ ಎಲ್ಲ ಆಡಳಿತ ಘಟಕಗಳು ಅಥವಾ ಕಚೇರಿಗಳಲ್ಲಿ ಅವಶ್ಯವಾಗಬಹುದಾದಷ್ಟು ಸಂಖ್ಯೆಯ ಅಧಿಕಾರಿಗಳನ್ನು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಅಥವಾ ಸಂದರ್ಭಾನುಸಾರ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳೆಂದು ಪದನಾಮೀಕರಿಸತಕ್ಕದ್ದು.

(2) (1)ನೇ ಉಪಪ್ರಕರಣದ ಉಪಬಂಧಗಳಿಗೆ ಬಾಧಕವಾಗದಂತೆ, ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವೂ ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ನೂರು ದಿನಗಳೊಳಗಾಗಿ ಪ್ರತಿಯೊಂದು ಉಪ ವಿಭಾಗೀಯ ಮಟ್ಟದಲ್ಲಿ ಅಥವಾ ಇತರ ಉಪ ಜಿಲ್ಲಾಮಟ್ಟದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಮಾಹಿತಿಗಾಗಿ ಅರ್ಜಿಗಳನ್ನು ಅಥವಾ ಅಪೀಲುಗಳನ್ನು ಸ್ವೀಕರಿಸಲು, ಅವುಗಳನ್ನು ಸಂದರ್ಭಾನುಸಾರ, 19ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಹಿರಿಯ ಅಧಿಕಾರಿಗೆ ಅಥವಾ ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ರಾಜ್ಯ ಮಾಹಿತಿ ಆಯೋಗಕ್ಕೆ ಕೂಡಲೇ ಕಳುಹಿಸಲು ಒಬ್ಬ ಅಧಿಕಾರಿಯನ್ನು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯೆಂದು ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯೆಂದು ಪದನಾಮೀಕರಿಸತಕ್ಕದ್ದು:

ಪರಂತು, ಮಾಹಿತಿಗಾಗಿ ಸಲ್ಲಿಸಲಾದ ಅರ್ಜಿಯನ್ನು ಅಥವಾ ಅಪೀಲನ್ನು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ನೀಡಿದ್ದಲ್ಲಿ, 7ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವಂತೆ ಉತ್ತರ ನೀಡುವ ಅವಧಿಯನ್ನು ಲೆಕ್ಕ ಹಾಕುವಾಗ ಅದಕ್ಕೆ ಐದು ದಿನಗಳ ಅವಧಿಯನ್ನು ಸೇರಿಸತಕ್ಕದ್ದು.

(3) ಪ್ರತಿಯೊಬ್ಬ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಹಿತಿ ಕೋರುವ ವ್ಯಕ್ತಿಗಳಿಂದ ಬರುವ ಮನವಿಗಳ ಬಗ್ಗೆ ವ್ಯವಹರಿಸತಕ್ಕದ್ದು ಮತ್ತು ಅಂತಹ ಮಾಹಿತಿ ಕೋರುವ ವ್ಯಕ್ತಿಗಳಿಗೆ ಸೂಕ್ತ ನೆರವು ನೀಡತಕ್ಕದ್ದು.

(4) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ತನ್ನ ಕರ್ತವ್ಯಗಳನ್ನು ಸರಿಯಾಗಿ ನಿರ್ವಹಿಸಲು ಅವಶ್ಯಕವೆಂದು ಆತನು ಅಥವಾ ಆಕೆಯು ಪರಿಗಣಿಸುವಂತಹ ಯಾರೇ ಇತರ ಅಧಿಕಾರಿಗಳ ನೆರವು ಕೋರಬಹುದು.

(5) (4)ನೇ ಉಪಪ್ರಕರಣದ ಅಡಿಯಲ್ಲಿ ಯಾರ ನೆರವನ್ನು ಕೋರಲಾಗಿದೆಯೋ ಆ ಯಾರೇ ಅಧಿಕಾರಿಯು, ಆತನ ಅಥವಾ ಆಕೆಯ ನೆರವನ್ನು ಕೋರಿರುವ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಎಲ್ಲಾ ನೆರವನ್ನು ನೀಡತಕ್ಕದ್ದು, ಮತ್ತು ಈ ಅಧಿನಿಯಮದ ಉಪಬಂಧಗಳ ಯಾವುದೇ ಉಲ್ಲಂಘನೆಯ ಉದ್ದೇಶಗಳಿಗಾಗಿ, ಅಂತಹ ಇತರ ಅಧಿಕಾರಿಯನ್ನು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಎಂದು ಪರಿಗಣಿಸತಕ್ಕದ್ದು.

**6. ಮಾಹಿತಿ ಪಡೆಯುವುದಕ್ಕಾಗಿ ಕೋರಿಕೆ.–** (1) ಈ ಅಧಿನಿಯಮದ ಅಡಿಯಲ್ಲಿ ಯಾವುದೇ ಮಾಹಿತಿಯನ್ನು ಪಡೆಯಲಿಚ್ಛಿಸುವ ವ್ಯಕ್ತಿಯು ಲಿಖಿತದಲ್ಲಿ ಅಥವಾ ವಿದ್ಯುನ್ಮಾನ ಸಾಧನಗಳ ಮೂಲಕ ಇಂಗ್ಲಿಷ್ ಅಥವಾ ಹಿಂದಿಯಲ್ಲಿ ಅಥವಾ ಯಾವ ಪ್ರದೇಶದಲ್ಲಿ ಅರ್ಜಿಯನ್ನು ಸಲ್ಲಿಸಲಾಗುತ್ತಿದೆಯೋ ಆ ಪ್ರದೇಶದ ಅಧಿಕೃತ ಭಾಷೆಯಲ್ಲಿ,–

(ಎ) ಸಂಬಂಧಪಟ್ಟ ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ;

(ಬಿ) ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ

– ಆತನು ಅಥವಾ ಆಕೆಯು ಕೋರಿರುವ ಮಾಹಿತಿಯ ವಿವರಗಳನ್ನು ಅದರಲ್ಲಿ ನಿರ್ದಿಷ್ಟಪಡಿಸಿ, ನಿಯಮಿಸಬಹುದಾದ ಶುಲ್ಕಗಳೊಂದಿಗೆ ಕೋರಿಕೆಯನ್ನು ಸಲ್ಲಿಸತಕ್ಕದ್ದು:

ಪರಂತು, ಅಂತಹ ಕೋರಿಕೆಯನ್ನು ಲಿಖಿತದಲ್ಲಿ ಸಲ್ಲಿಸಲು ಸಾಧ್ಯವಿಲ್ಲದಿರುವಲ್ಲಿ, ಮೌಖಿಕವಾಗಿ ಕೋರಿಕೆ ಸಲ್ಲಿಸಿದಾಗ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ

ಸಾರ್ವಜನಿಕ ಮಾಹಿತಿ ಅಧಿಕಾರಿಯು ಆ ವ್ಯಕ್ತಿಗೆ ಅದನ್ನು ಬರವಣಿಗೆಗೆ ಇಳಿಸಲು ಎಲ್ಲಾ ಸೂಕ್ತ ನೆರವನ್ನು ನೀಡತಕ್ಕದ್ದು.

(2) ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ಅರ್ಜಿದಾರನನ್ನು, ಅವನನ್ನು ಸಂಪರ್ಕಿಸಲು ಅವಶ್ಯವಿರುವ ವಿವರಗಳನ್ನು ಹೊರತುಪಡಿಸಿ ಮಾಹಿತಿ ಕೋರಿಕೆಗೆ ಯಾವುದೇ ಕಾರಣವನ್ನು ಅಥವಾ ಯಾವುವೇ ಇತರ ವೈಯಕ್ತಿಕ ವಿವರಗಳನ್ನು ನೀಡುವಂತೆ ಅಗತ್ಯಪಡಿಸತಕ್ಕದ್ದಲ್ಲ.

(3) ಸಾರ್ವಜನಿಕ ಪ್ರಾಧಿಕಾರಕ್ಕೆ,–

(i) ಮತ್ತೊಂದು ಸಾರ್ವಜನಿಕ ಪ್ರಾಧಿಕಾರ ಹೊಂದಿರುವಂಥ ಮಾಹಿತಿಯನ್ನು; ಅಥವಾ

(ii) ವಸ್ತು ವಿಷಯವು ಮತ್ತೊಂದು ಸಾರ್ವಜನಿಕ ಪ್ರಾಧಿಕಾರದ ಕಾರ್ಯನಿರ್ವಹಣೆಗೆ ನಿಕಟವಾಗಿ ಸಂಬಂಧಿಸಿರುವ ಮಾಹಿತಿಯನ್ನು

– ಕೋರಿ ಅರ್ಜಿ ಸಲ್ಲಿಸಿದ್ದರೆ, ಯಾವ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಲಾಗಿದೆಯೋ ಆ ಸಾರ್ವಜನಿಕ ಪ್ರಾಧಿಕಾರವು ಅರ್ಜಿಯನ್ನು ಅಥವಾ ಸೂಕ್ತವೆನಿಸಬಹುದಾದ ಅದರ ಭಾಗವನ್ನು ಆ ಮತ್ತೊಂದು ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು ಮತ್ತು ಅಂಥ ವರ್ಗಾವಣೆಯನ್ನು ಕೂಡಲೇ ಅರ್ಜಿದಾರನಿಗೆ ತಿಳಿಸತಕ್ಕದ್ದು:

ಪರಂತು, ಈ ಉಪಪ್ರಕರಣದ ಅನುಸಾರವಾಗಿ ಅರ್ಜಿಯ ವರ್ಗಾವಣೆಯನ್ನು ಕಾರ್ಯಸಾಧ್ಯವಾದಷ್ಟು ಬೇಗನೆ ಮಾಡತಕ್ಕದ್ದು. ಆದರೆ ಯಾವುದೇ ಸಂದರ್ಭದಲ್ಲಿಯೂ ಅರ್ಜಿ ಸ್ವೀಕರಿಸಿದ ದಿನಾಂಕದಿಂದ ಅದು ಐದು ದಿನಗಳನ್ನು ಮೀರತಕ್ಕದ್ದಲ್ಲ.

**7. ಕೋರಿಕೆಯ ವಿಲೆ.**– (1) 5ನೇ ಪ್ರಕರಣದ (2)ನೇ ಉಪಪ್ರಕರಣದ ಪರಂತುಕಕ್ಕೆ ಅಥವಾ 6ನೇ ಪ್ರಕರಣದ (3)ನೇ ಉಪಪ್ರಕರಣದ ಪರಂತುಕಕ್ಕೆ ಒಳಪಟ್ಟು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು 6ನೇ ಪ್ರಕರಣದ ಅಡಿಯಲ್ಲಿ ಕೋರಿಕೆಯನ್ನು ಸ್ವೀಕರಿಸಿದ ನಂತರ ತ್ವರಿತವಾಗಿ ಮತ್ತು ಯಾವುದೇ ಸಂದರ್ಭದಲ್ಲಿ ಕೋರಿಕೆಯನ್ನು ಸ್ವೀಕರಿಸಿದ ಮೂವತ್ತು ದಿವಸಗಳೊಳಗಾಗಿ, ನಿಯಮಿಸಬಹುದಾದಂತಹ ಶುಲ್ಕವನ್ನು ಸಂದಾಯ ಮಾಡಿದ ಮೇಲೆ ಮಾಹಿತಿ ಒದಗಿಸತಕ್ಕದ್ದು ಅಥವಾ 8 ಮತ್ತು 9ನೇ ಪ್ರಕರಣಗಳಲ್ಲಿ ನಿರ್ದಿಷ್ಟಪಡಿಸಿದ ಯಾವುವೇ ಕಾರಣಗಳಿಗಾಗಿ ಕೋರಿಕೆಯನ್ನು ತಿರಸ್ಕರಿಸತಕ್ಕದ್ದು:

ಪರಂತು, ಕೋರಿರುವ ಮಾಹಿತಿಯು ಒಬ್ಬ ವ್ಯಕ್ತಿಯ ಜೀವಕ್ಕೆ ಅಥವಾ ಸ್ವಾತಂತ್ರ್ಯಕ್ಕೆ ಸಂಬಂಧಿಸಿರುವಲ್ಲಿ ಆ ಕೋರಿಕೆಯನ್ನು ಸ್ವೀಕರಿಸಿದ ನಲವತ್ತೆಂಟು ಗಂಟೆಗಳೊಳಗಾಗಿ ಅದನ್ನು ಒದಗಿಸತಕ್ಕದ್ದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು (1)ನೇ ಉಪಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಅವಧಿಯೊಳಗಾಗಿ ಮಾಹಿತಿಗಾಗಿ ಮಾಡಿಕೊಂಡ ಕೋರಿಕೆಯ ಮೇಲೆ ತೀರ್ಮಾನ ತೆಗೆದುಕೊಳ್ಳಲು ವಿಫಲನಾದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆಯನ್ನು ತಿರಸ್ಕರಿಸಿದ್ದಾನೆಂದು ಭಾವಿಸತಕ್ಕದ್ದು.

(3) ಮಾಹಿತಿ ಒದಗಿಸುವುದಕ್ಕೆ ಆಗುವ ವೆಚ್ಚವನ್ನು ಸೂಚಿಸುವ ಯಾವುದೇ ಹೆಚ್ಚಿನ ಶುಲ್ಕವನ್ನು ಸಂದಾಯ ಮಾಡಿದ ಮೇಲೆ ಮಾಹಿತಿ ಒದಗಿಸಲು ತೀರ್ಮಾನ ತೆಗೆದುಕೊಂಡಿದ್ದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆ ಸಲ್ಲಿಸಿರುವ ವ್ಯಕ್ತಿಗೆ,–

(ಎ) (1)ನೇ ಉಪಪ್ರಕರಣದ ಅಡಿಯಲ್ಲಿ ನಿಯಮಿಸಿರುವ ಶುಲ್ಕದ ಅನುಸಾರವಾಗಿ ಮೊಬಲಗನ್ನು ನಿರ್ಧರಿಸಲು ಮಾಡಿದ ಲೆಕ್ಕಾಚಾರಗಳೊಂದಿಗೆ ಅವನು ನಿರ್ಧರಿಸಿರುವಂತೆ ಮಾಹಿತಿ ಒದಗಿಸಲು ತಗಲುವ

ವೆಚ್ಚವನ್ನು ಸೂಚಿಸುವ ಹೆಚ್ಚಿನ ಶುಲ್ಕದ ವಿವರಗಳನ್ನು ನೀಡಿ, ಶುಲ್ಕವನ್ನು ಠೇವಣಿ ಇಡುವಂತೆ ಮತ್ತು ಸದರಿ ಮಾಹಿತಿಯ ರವಾನೆ ಮತ್ತು ಶುಲ್ಕ ಸಂದಾಯದ ನಡುವೆ ಬರುವ ಮಧ್ಯಂತರ ಅವಧಿಯನ್ನು ಆ ಉಪ ಪ್ರಕರಣದಲ್ಲಿ ಉಲ್ಲೇಖಿಸಿರುವ ಮೂವತ್ತು ದಿವಸಗಳ ಅವಧಿಯನ್ನು ಲೆಕ್ಕ ಹಾಕುವ ಉದ್ದೇಶಕ್ಕಾಗಿ ಗಣನೆಗೆ ತೆಗೆದುಕೊಳ್ಳತಕ್ಕದ್ದಲ್ಲವೆಂದು ಅವನನ್ನು ಕೋರಿ;

(ಬಿ) ಅಪೀಲು ಪ್ರಾಧಿಕಾರದ, ಕಾಲಮಿತಿಯ, ಕಾರ್ಯ ವಿಧಾನದ ಮತ್ತು ಯಾವುದೇ ಇತರ ರೂಪದಲ್ಲಿನ ವಿವರಗಳೂ ಸೇರಿದಂತೆ ವಿಧಿಸಲಾದ ಶುಲ್ಕದ ಅಥವಾ ಒದಗಿಸಲಾದ ಮಾಹಿತಿ ಪಡೆಯಲು ಒದಗಿಸಲಾದ ಅವಕಾಶದ ರೀತಿ ಇವುಗಳ ಬಗ್ಗೆ ತೀರ್ಮಾನವನ್ನು ಪುನರ್ ಪರಿಶೀಲಿಸುವ ಸಂಬಂಧದಲ್ಲಿ ಅವನ ಅಥವಾ ಅವಳ ಹಕ್ಕಿಗೆ ಸಂಬಂಧಿಸಿದ ಮಾಹಿತಿಯನ್ನು ನೀಡಿ

– ಸೂಚನೆ ಕಳುಹಿಸತಕ್ಕದ್ದು.

(4) ಈ ಅಧಿನಿಯಮದ ಅಡಿಯಲ್ಲಿ ದಾಖಲೆಯನ್ನು ಅಥವಾ ಅದರ ಭಾಗವನ್ನು ಪಡೆಯುವ ಅವಕಾಶವನ್ನು ಒದಗಿಸುವುದು ಅಗತ್ಯವಾಗಿರುವಲ್ಲಿ ಮತ್ತು ಯಾರಿಗೆ ಆ ಅವಕಾಶ ಒದಗಿಸಬೇಕಾಗಿದೆಯೋ ಆ ವ್ಯಕ್ತಿಯು ಇಂದ್ರಿಯ ದುರ್ಬಲತೆ ಹೊಂದಿರುವಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಪರಿಶೀಲನೆಗೆ ಸೂಕ್ತವಾದಂತಹ ನೆರವನ್ನು ಒದಗಿಸುವುದೂ ಒಳಗೊಂಡಂತೆ ಮಾಹಿತಿಯನ್ನು ಪಡೆಯಲು ಸಾಧ್ಯವಾಗುವಂತೆ ನೆರವನ್ನೂ ಒದಗಿಸತಕ್ಕದ್ದು.

(5) ಮಾಹಿತಿಯನ್ನು ಮುದ್ರಿತ ಅಥವಾ ಯಾವುದೇ ವಿದ್ಯುನ್ಮಾನ ರೂಪದಲ್ಲಿ ಒದಗಿಸಬೇಕಾಗಿರುವಲ್ಲಿ, ಅರ್ಜಿದಾರನು (6)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು ನಿಯಮಿಸಬಹುದಾದಂಥ ಶುಲ್ಕವನ್ನು ಸಂದಾಯ ಮಾಡತಕ್ಕದ್ದು:

ಪರಂತು, 6ನೇ ಪ್ರಕರಣದ (1)ನೇ ಉಪಪ್ರಕರಣದ ಮತ್ತು 7ನೇ ಪ್ರಕರಣದ (1) ಮತ್ತು (5)ನೇ ಉಪಪ್ರಕರಣದ ಅಡಿಯಲ್ಲಿ ನಿಯಮಿಸಿರುವ ಶುಲ್ಕವು ನ್ಯಾಯಯುತವಾದುದು ಆಗಿರತಕ್ಕದ್ದು ಮತ್ತು ಸಮುಚಿತ ಸರ್ಕಾರವು ನಿರ್ಧರಿಸಬಹುದಾದಂತೆ ಬಡತನ ರೇಖೆಗಿಂತ ಕೆಳಗಿರುವ ವ್ಯಕ್ತಿಗಳಿಗೆ ಅಂತಹ ಶುಲ್ಕವನ್ನು ವಿಧಿಸತಕ್ಕದ್ದಲ್ಲ.

(6) (5)ನೇ ಉಪಪ್ರಕರಣದಲ್ಲಿ ಏನೇ ಒಳಗೊಂಡಿದ್ದಾಗ್ಯೂ, ಸಾರ್ವಜನಿಕ ಪ್ರಾಧಿಕಾರವು (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಕಾಲಪರಿಮಿತಿಗಳನ್ನು ಪಾಲಿಸಲು ವಿಫಲವಾದಲ್ಲಿ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ವ್ಯಕ್ತಿಗೆ ಮಾಹಿತಿಯನ್ನು, ಶುಲ್ಕವಿಲ್ಲದೆ ಒದಗಿಸತಕ್ಕದ್ದು.

(7) (1)ನೇ ಉಪಪ್ರಕರಣದ ಅಡಿಯಲ್ಲಿ ಯಾವುದೇ ತೀರ್ಮಾನ ತೆಗೆದುಕೊಳ್ಳುವುದಕ್ಕೆ ಮೊದಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು 11ನೇ ಪ್ರಕರಣದ ಅಡಿಯಲ್ಲಿ ಮೂರನೇ ಪಕ್ಷಕಾರನು ಸಲ್ಲಿಸಿದ ಮನವಿಯನ್ನು ಪರಿಗಣನೆಗೆ ತೆಗೆದುಕೊಳ್ಳತಕ್ಕದ್ದು.

(8) ಕೋರಿಕೆಯನ್ನು (1)ನೇ ಉಪಪ್ರಕರಣದ ಅಡಿಯಲ್ಲಿ ತಿರಸ್ಕರಿಸಿದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆ ಸಲ್ಲಿಸುವ ವ್ಯಕ್ತಿಗೆ,–

(i) ಹಾಗೆ ತಿರಸ್ಕರಿಸಿದ್ದಕ್ಕೆ ಕಾರಣಗಳನ್ನು;

(ii) ಹಾಗೆ ತಿರಸ್ಕರಿಸಿದುದರ ವಿರುದ್ಧ ಯಾವ ಅವಧಿಯಲ್ಲಿ ಅಪೀಲನ್ನು ಸಲ್ಲಿಸಬಹುದೋ ಆ ಅವಧಿಯನ್ನು; ಮತ್ತು

(iii) ಅಪೀಲು ಪ್ರಾಧಿಕಾರದ ವಿವರಗಳನ್ನು

– ತಿಳಿಸತಕ್ಕದ್ದು.

(9) ಮಾಹಿತಿಯನ್ನು, ಸಾರ್ವಜನಿಕ ಪ್ರಾಧಿಕಾರದ ಸಂಪನ್ಮೂಲಗಳು ಅಸಮ ಪ್ರಮಾಣದಲ್ಲಿ ಬಳಕೆಯಾಗುವ ಅಥವಾ ಪ್ರಶ್ನಿತ ದಾಖಲೆಯ ಸುರಕ್ಷತೆಗೆ ಅಥವಾ ಸಂರಕ್ಷಣೆಗೆ ಹಾನಿಯುಂಟಾಗುವಂತಿದ್ದ ಹೊರತು, ಸಾಮಾನ್ಯವಾಗಿ ಅದನ್ನು ಕೋರಿದ ರೂಪದಲ್ಲಿ ಒದಗಿಸತಕ್ಕದ್ದು.

**8. ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ವಿನಾಯಿತಿ.–** (1) ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಯಾರೇ ನಾಗರಿಕನಿಗೆ,–

(ಎ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಭಾರತದ ಸಾರ್ವಭೌಮತ್ವಕ್ಕೆ ಮತ್ತು ಏಕತೆಗೆ, ರಾಷ್ಟ್ರದ ಭದ್ರತೆಗೆ, ಕಾರ್ಯ ತಂತ್ರಕ್ಕೆ, ವೈಜ್ಞಾನಿಕ ಅಥವಾ ಆರ್ಥಿಕ ಹಿತಾಸಕ್ತಿಗಳಿಗೆ, ವಿದೇಶದೊಂದಿಗೆ ಸಂಬಂಧ ಇವುಗಳ ಮೇಲೆ ಪ್ರತಿಕೂಲ ಪರಿಣಾಮವುಂಟಾಗುತ್ತದೋ ಅಥವಾ ಒಂದು ಅಪರಾಧಕ್ಕೆ ಪ್ರೇರಣೆ ನೀಡುತ್ತದೋ ಅಂಥ ಮಾಹಿತಿಯನ್ನು;

(ಬಿ) ಯಾವುದೇ ನ್ಯಾಯಾಲಯವು ಅಥವಾ ನ್ಯಾಯಾಧಿಕರಣವು ಯಾವ ಮಾಹಿತಿಯ ಪ್ರಕಟಣೆಯನ್ನು ಸ್ಪಷ್ಟವಾಗಿ ನಿಷೇಧಿಸಿದೆಯೋ ಅಥವಾ ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ನ್ಯಾಯಾಲಯ ನಿಂದನೆಯಾಗಬಹುದೋ ಅಂಥ ಮಾಹಿತಿಯನ್ನು;

(ಸಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಸಂಸತ್ತು ಅಥವಾ ರಾಜ್ಯ ವಿಧಾನ ಮಂಡಲದ ಹಕ್ಕುಚ್ಯುತಿ ಉಂಟಾಗುವುದೋ ಅಂಥ ಮಾಹಿತಿಯನ್ನು;

(ಡಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಮೂರನೇ ಪಕ್ಷಕಾರನ ಸ್ಪರ್ಧಾತ್ಮಕ ಸ್ಥಾನಮಾನಕ್ಕೆ ಅಪಾಯವುಂಟಾಗುವುದೋ ಅಂಥ ವಾಣಿಜ್ಯ ರಹಸ್ಯ, ವ್ಯಾಪಾರ ಗೌಪ್ಯತೆಗಳು ಅಥವಾ ಬೌದ್ಧಿಕ ಆಸ್ತಿಯನ್ನೊಳಗೊಂಡ ಮಾಹಿತಿಯನ್ನು ಬಹಿರಂಗಪಡಿಸುವುದು ಸಾರ್ವಜನಿಕರ ಹೆಚ್ಚಿನ ಹಿತದೃಷ್ಟಿಯಿಂದ ಅಗತ್ಯವೆಂದು ಸಕ್ಷಮ ಪ್ರಾಧಿಕಾರಿಗೆ ಮನದಟ್ಟಾದ ಹೊರತು ಅಂಥ ಮಾಹಿತಿಯನ್ನು;

(ಇ) ತನ್ನ ವಿಶ್ವಾಸ ಆಧಾರಿತ ಸಂಬಂಧದಲ್ಲಿ ಒಬ್ಬ ವ್ಯಕ್ತಿಗೆ ದೊರಕುವ ಮಾಹಿತಿ, ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಸಾರ್ವಜನಿಕರ ಹೆಚ್ಚಿನ ಹಿತದೃಷ್ಟಿಯಿಂದ ಅಗತ್ಯವೆಂದು ಸಕ್ಷಮ ಪ್ರಾಧಿಕಾರಿಗೆ ಮನದಟ್ಟಾದ ಹೊರತು ಅಂಥ ಮಾಹಿತಿಯನ್ನು;

(ಎಫ್) ವಿದೇಶಿ ಸರ್ಕಾರದಿಂದ ರಹಸ್ಯವಾಗಿ ಪಡೆದ ಮಾಹಿತಿಯನ್ನು;

(ಜಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಯಾರೇ ವ್ಯಕ್ತಿಯ ಜೀವ ಅಥವಾ ದೈಹಿಕ ಸುರಕ್ಷತೆಗೆ ಅಪಾಯ ಉಂಟಾಗುತ್ತಿದೆಯೋ ಅಂಥ ಮಾಹಿತಿಯನ್ನು ಅಥವಾ ಕಾನೂನು ಜಾರಿಯ ಅಥವಾ ಭದ್ರತೆಯ ಉದ್ದೇಶಗಳಿಗಾಗಿ ರಹಸ್ಯವಾಗಿ ನೀಡಿದ ಮಾಹಿತಿಯ ಅಥವಾ ಸಹಾಯದ ಮೂಲವನ್ನು ಗುರುತಿಸುವ ಮಾಹಿತಿಯನ್ನು;

(ಹೆಚ್) ತನಿಖಾ ಪ್ರಕ್ರಿಯೆ ಅಥವಾ ಅಪರಾಧಿಗಳ ದಸ್ತಗಿರಿಗೆ ಅಥವಾ ಪ್ರಾಸಿಕ್ಯೂಷನ್ ಕಾರ್ಯಕ್ಕೆ ಅಡಚಣೆಯನ್ನುಂಟು ಮಾಡುವಂಥ ಮಾಹಿತಿಯನ್ನು;

(ಐ) ಮಂತ್ರಿ ಮಂಡಲದ, ಕಾರ್ಯದರ್ಶಿಗಳ ಮತ್ತು ಇತರ ಅಧಿಕಾರಿಗಳ ಚರ್ಚೆಗಳ ದಾಖಲೆಗಳು ಸೇರಿದಂತೆ ಸಚಿವ ಸಂಪುಟದ ಕಾಗದ ಪತ್ರಗಳನ್ನು:

ಪರಂತು, ಮಂತ್ರಿ ಮಂಡಲದ ನಿರ್ಣಯಗಳು, ಆ ನಿರ್ಣಯಗಳಿಗೆ ಕಾರಣಗಳು ಮತ್ತು ತೆಗೆದುಕೊಂಡ ನಿರ್ಣಯಗಳಿಗೆ ಆಧರಿಸಿದ ವಿಷಯ ಸಾಮಗ್ರಿ ಇವುಗಳನ್ನು, ನಿರ್ಣಯವನ್ನು ತೆಗೆದುಕೊಂಡ

ಮತ್ತು ಆ ವಿಷಯ ಪೂರ್ಣಗೊಂಡ ಅಥವಾ ಮುಕ್ತಾಯಗೊಂಡ ತರುವಾಯ ಸಾರ್ವಜನಿಕರಿಗೆ ತಿಳಿಯಪಡಿಸತಕ್ಕದ್ದು:

ಮತ್ತೂ ಪರಂತು, ಬಹಿರಂಗಪಡಿಸಬಾರದೆಂದು ಈ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಷಯಗಳನ್ನು ಬಹಿರಂಗಪಡಿಸತಕ್ಕದ್ದಲ್ಲ.

(ಜೆ) ಯಾವ ಮಾಹಿತಿಯ ಬಹಿರಂಗಪಡಿಸುವಿಕೆಯು ಯಾವುದೇ ಸಾರ್ವಜನಿಕ ಚಟುವಟಿಕೆ ಅಥವಾ ಹಿತಾಸಕ್ತಿಗೆ ಸಂಬಂಧಪಡುವುದಿಲ್ಲವೋ ಅಥವಾ ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ವ್ಯಕ್ತಿಯ ಗೌಪ್ಯತೆಯನ್ನು ಅನಗತ್ಯವಾಗಿ ಅತಿಕ್ರಮಿಸಿದಂತಾಗುತ್ತದೆಯೋ ಅಂಥ ವೈಯಕ್ತಿಕ ಮಾಹಿತಿಗೆ ಸಂಬಂಧಿಸಿದ ಮಾಹಿತಿಯನ್ನು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಅಪೀಲು ಪ್ರಾಧಿಕಾರಿಗೆ ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಸಾರ್ವಜನಿಕರ ಹೆಚ್ಚಿನ ಹಿತದೃಷ್ಟಿಯಿಂದ ನ್ಯಾಯಸಮ್ಮತ ಎಂದು ಮನದಟ್ಟಾದ ಹೊರತು ಅಂಥ ಮಾಹಿತಿಯನ್ನು

– ಒದಗಿಸಲು ಯಾವುದೇ ಬಾಧ್ಯತೆ ಇರತಕ್ಕದ್ದಲ್ಲ:

ಪರಂತು, ಯಾವ ಮಾಹಿತಿಯನ್ನು ಸಂಸತ್ತಿಗೆ ಅಥವಾ ರಾಜ್ಯ ವಿಧಾನ ಮಂಡಲಕ್ಕೆ ಒದಗಿಸಲು ನಿರಾಕರಿಸಲು ಬರುವುದಿಲ್ಲವೋ, ಆ ಮಾಹಿತಿಯನ್ನು ಯಾರೇ ವ್ಯಕ್ತಿಗೆ ನಿರಾಕರಿಸತಕ್ಕದ್ದಲ್ಲ.

(2) ಸರ್ಕಾರಿ ರಹಸ್ಯಗಳ ಅಧಿನಿಯಮ, 1923 (1923ರ 19) ರಲ್ಲಿ ಏನೇ ಒಳಗೊಂಡಿದ್ದರೂ ಅಥವಾ (1)ನೇ ಉಪಪ್ರಕರಣದ ಅನುಸಾರವಾಗಿ ಅನುಮತಿಸಬಹುದಾದ ವಿನಾಯಿತಿಗಳೇನೇ ಇದ್ದರೂ, ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಸಂರಕ್ಷಿತ ಹಿತಾಸಕ್ತಿಗಳಿಗೆ ಉಂಟಾಗುವ ಹಾನಿಗಿಂತ ಸಾರ್ವಜನಿಕ ಹಿತಾಸಕ್ತಿಯೇ ಹೆಚ್ಚು ಮಹತ್ವದ್ದಾಗಿದ್ದರೆ, ಆ ಮಾಹಿತಿಯನ್ನು ಪಡೆಯಲು ಸಾರ್ವಜನಿಕ ಪ್ರಾಧಿಕಾರಿಯು ಅನುಮತಿ ನೀಡಬಹುದು.

(3) 6ನೇ ಪ್ರಕರಣದ ಅಡಿಯಲ್ಲಿ ಕೋರಿಕೆ ಸಲ್ಲಿಸಿದ ದಿನಾಂಕಕ್ಕೆ ಇಪ್ಪತ್ತು ವರ್ಷಗಳಷ್ಟು ಹಿಂದೆ ನಡೆದಿರುವ, ಉಂಟಾಗಿರುವ ಅಥವಾ ಸಂಭವಿಸಿರುವ ಯಾವುದೇ ಘಟನೆಗೆ, ಸಂಗತಿಗೆ ಅಥವಾ ವಿಷಯಕ್ಕೆ ಸಂಬಂಧಪಟ್ಟ ಯಾವುದೇ ಮಾಹಿತಿಯನ್ನು ಆ ಪ್ರಕರಣದ ಮೇರೆಗೆ ಕೋರಿಕೆ ಸಲ್ಲಿಸುವಂಥ ಯಾರೇ ವ್ಯಕ್ತಿಗೆ (1)ನೇ ಉಪ ಪ್ರಕರಣದ (ಎ) (ಸಿ) ಮತ್ತು (ಐ) ಖಂಡಗಳ ಉಪಬಂಧಗಳಿಗೊಳಪಟ್ಟು ಒದಗಿಸತಕ್ಕದ್ದು:

ಪರಂತು, ಸದರಿ ಇಪ್ಪತ್ತು ವರ್ಷಗಳ ಅವಧಿಯನ್ನು ಯಾವ ದಿನಾಂಕದಿಂದ ಲೆಕ್ಕ ಹಾಕಬೇಕು ಎಂಬುದರ ಬಗ್ಗೆ ಯಾವುದೇ ಪ್ರಶ್ನೆ ಉದ್ಭವಿಸಿರುವಲ್ಲಿ, ಈ ಅಧಿನಿಯಮದಲ್ಲಿ ಉಪಬಂಧಿಸಲಾಗಿರುವ ಅಪೀಲುಗಳಿಗೆ ಒಳಪಟ್ಟು, ಕೇಂದ್ರ ಸರ್ಕಾರದ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

**9. ಕೆಲವು ಸಂದರ್ಭಗಳಲ್ಲಿ ಮಾಹಿತಿ ಪಡೆಯುವ ಅವಕಾಶವನ್ನು ತಿರಸ್ಕರಿಸುವುದಕ್ಕೆ ಕಾರಣಗಳು.–** 8ನೇ ಪ್ರಕರಣದ ಉಪಬಂಧಗಳಿಗೆ ಬಾಧಕವಾಗದಂತೆ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಅಂಥ ಮಾಹಿತಿಯನ್ನು ಒದಗಿಸುವುದರಿಂದ ರಾಜ್ಯವನ್ನು ಹೊರತುಪಡಿಸಿ ಒಬ್ಬ ವ್ಯಕ್ತಿಯು ಹೊಂದಿರುವ ಕೃತಿಸ್ವಾಮ್ಯದ ಉಲ್ಲಂಘನೆಯನ್ನು ಒಳಗೊಳ್ಳಬಹುದಾದಲ್ಲಿ ಮಾಹಿತಿ ಪಡೆಯಲು ಮಾಡಿದ ಕೋರಿಕೆಯನ್ನು ತಿರಸ್ಕರಿಸಬಹುದು.

**10. ಪ್ರತ್ಯೇಕಿಸುವಿಕೆ.–** (1) ಮಾಹಿತಿ ಪಡೆಯುವುದಕ್ಕಾಗಿ ಸಲ್ಲಿಸಿದ ಕೋರಿಕೆಯನ್ನು, ಅದರಲ್ಲಿ ಕೋರಿರುವ ಮಾಹಿತಿಯು ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಿರುವಂಥ ಮಾಹಿತಿಗೆ ಸಂಬಂಧಿಸಿದ್ದಾಗಿದೆ ಎಂಬ ಕಾರಣದ ಮೇಲೆ ತಿರಸ್ಕರಿಸಿರುವಲ್ಲಿ ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಅಡಿಯಲ್ಲಿ ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಿರುವಂಥ ಯಾವುದೇ ಮಾಹಿತಿಯನ್ನು ಒಳಗೊಂಡಿರದಂಥ ಹಾಗೂ ವಿನಾಯಿತಿಗೊಳಿಸಿರುವ ಮಾಹಿತಿಯನ್ನೊಳಗೊಂಡ

ಯಾವುದೇ ಭಾಗದಿಂದ ಅದನ್ನು ಯುಕ್ತವಾಗಿ ಪ್ರತ್ಯೇಕಿಸಬಹುದಾದಂಥ ದಾಖಲೆಯ ಆ ಭಾಗವನ್ನು ಪಡೆಯಲು ಅವಕಾಶವನ್ನು ನೀಡಬಹುದು.

(2) (1)ನೇ ಉಪಪ್ರಕರಣದ ಮೇರೆಗೆ ದಾಖಲೆಯ ಆ ಭಾಗವನ್ನು ಪಡೆಯುವ ಅವಕಾಶವನ್ನು ನೀಡಿದಾಗ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು,–

(ಎ) ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಲಾಗಿರುವಂಥ ಮಾಹಿತಿಯನ್ನು ಒಳಗೊಂಡಿರುವ ದಾಖಲೆಯನ್ನು ಪ್ರತ್ಯೇಕಿಸಿದ ನಂತರ, ಕೋರಲಾಗಿರುವ ದಾಖಲೆಯ ಭಾಗವನ್ನು ಮಾತ್ರ ಒದಗಿಸಲಾಗುತ್ತದೆ ಎಂದು;

(ಬಿ) ನಿರ್ಣಯಗಳು ಯಾವ ವಿಷಯವನ್ನು ಆಧರಿಸಿವೆಯೋ ಆ ವಿಷಯವನ್ನು ಉಲ್ಲೇಖಿಸಿ ಸಂಗತಿಗೆ ಸಂಬಂಧಿಸಿದ ಯಾವುದೇ ಮಹತ್ವದ ಪ್ರಶ್ನೆಯ ಮೇಲಿನ ಯಾವುವೇ ನಿರ್ಣಯಗಳನ್ನು ಒಳಗೊಂಡಂತೆ ತೀರ್ಮಾನದ ಬಗೆಗಿನ ಕಾರಣಗಳನ್ನು;

(ಸಿ) ತೀರ್ಮಾನವನ್ನು ನೀಡುವ ವ್ಯಕ್ತಿಯ ಹೆಸರನ್ನು ಮತ್ತು ಪದನಾಮವನ್ನು;

(ಡಿ) ಆತನು ಅಥವಾ ಆಕೆಯು ಲೆಕ್ಕ ಹಾಕಿದ ಶುಲ್ಕದ ವಿವರಗಳನ್ನು ಮತ್ತು ಅರ್ಜಿದಾರನು ಠೇವಣಿ ಮಾಡಬೇಕಾದ ಶುಲ್ಕದ ಮೊಬಲಗನ್ನು; ಮತ್ತು

(ಇ) ಮಾಹಿತಿಯ ಆ ಭಾಗವನ್ನು ಬಹಿರಂಗಪಡಿಸದಿರುವುದಕ್ಕೆ ಸಂಬಂಧಿಸಿದ ತೀರ್ಮಾನವನ್ನು ಪುನರ್ ಪರಿಶೀಲಿಸುವುದಕ್ಕೆ ಸಂಬಂಧಪಟ್ಟಂತೆ ಆತನಿಗೆ ಅಥವಾ ಆಕೆಗೆ ಇರುವ ಹಕ್ಕುಗಳನ್ನು, ವಿಧಿಸಲಾದ ಶುಲ್ಕದ ಮೊಬಲಗನ್ನು ಅಥವಾ ಮಾಹಿತಿ ಪಡೆಯಲು ಒದಗಿಸಿದ ಅವಕಾಶದ ರೀತಿಯನ್ನು ಹಾಗೂ 19ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಹಿರಿಯ ಅಧಿಕಾರಿಯ ಅಥವಾ ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ವಿವರಗಳನ್ನು, ಕಾಲಪರಿಮಿತಿಯನ್ನು, ಪ್ರಕ್ರಿಯೆಯನ್ನು ಹಾಗೂ ಮಾಹಿತಿ ಪಡೆಯುವ ಅವಕಾಶದ ಯಾವುದೇ ಇತರ ರೀತಿಯನ್ನು ಒಳಗೊಂಡಂತೆ

– ತಿಳಿಸಿ ಅರ್ಜಿದಾರನಿಗೆ ಒಂದು ನೋಟೀಸು ನೀಡತಕ್ಕದ್ದು.

**11. ಮೂರನೇ ಪಕ್ಷಕಾರನ ಮಾಹಿತಿ.–** (1) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಈ ಅಧಿನಿಯಮದ ಮೇರೆಗೆ ಸಲ್ಲಿಸಿರುವ ಕೋರಿಕೆಯ ಮೇಲೆ ಮೂರನೇ ಪಕ್ಷಕಾರನಿಗೆ ಸಂಬಂಧಿಸಿದ ಅಥವಾ ಆತ ಪೂರೈಸಿದಂಥ ಹಾಗೂ ಆ ಮೂರನೇ ಪಕ್ಷಕಾರನು ರಹಸ್ಯ ಎಂದು ಪರಿಗಣಿಸಿರುವಂಥ ಯಾವುದೇ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸಲು ಉದ್ದೇಶಿಸಿದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆಯನ್ನು ಸ್ವೀಕರಿಸಿದ ಐದು ದಿವಸಗಳೊಳಗೆ, ಆ ಕೋರಿಕೆಯನ್ನು ಸಲ್ಲಿಸಿರುವಂಥ ಮೂರನೆ ಪಕ್ಷಕಾರನಿಗೆ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಉದ್ದೇಶಿಸಿದ್ದಾನೆ ಎಂಬ ವಾಸ್ತವ ಸಂಗತಿಯನ್ನು ತಿಳಿಸಿ ಲಿಖಿತ ನೋಟೀಸು ನೀಡತಕ್ಕದ್ದು ಹಾಗೂ ಮಾಹಿತಿಯನ್ನು ಬಹಿರಂಗಪಡಿಸಬೇಕೆ ಎಂಬ ಬಗ್ಗೆ ಲಿಖಿತ ಅಥವಾ ಮೌಖಿಕ ಹೇಳಿಕೆಯನ್ನು ಸಲ್ಲಿಸುವಂತೆ ಮೂರನೇ ಪಕ್ಷಕಾರನನ್ನು ಕೋರತಕ್ಕದ್ದು ಹಾಗೂ ಮೂರನೆ ಪಕ್ಷಕಾರನು ಸಲ್ಲಿಸಿದ ಅಂಥ ಹೇಳಿಕೆಯನ್ನು, ಮಾಹಿತಿಯನ್ನು ಬಹಿರಂಗಪಡಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳುವಾಗ ಗಮನದಲ್ಲಿ ಇಟ್ಟುಕೊಳ್ಳತಕ್ಕದ್ದು:

ಪರಂತು, ಕಾನೂನಿನಿಂದ ಸಂರಕ್ಷಣೆ ಪಡೆದ ವ್ಯಾಪಾರ ಅಥವಾ ವಾಣಿಜ್ಯ ರಹಸ್ಯಗಳ ವಿಷಯದಲ್ಲಿ ಹೊರತು, ಬಹಿರಂಗಪಡಿಸುವುದರಿಂದ ಅಂಥ ಮೂರನೇ ಪಕ್ಷಕಾರನ ಹಿತಾಸಕ್ತಿಗೆ ಉಂಟಾಗುವ ಯಾವುದೇ ಸಂಭಾವ್ಯ ಹಾನಿಗಿಂತ ಅಥವಾ ಕ್ಷತಿಗಿಂತ ಸಾರ್ವಜನಿಕ ಹಿತಾಸಕ್ತಿಯು ಹೆಚ್ಚು ಮಹತ್ವವೆನಿಸಿದರೆ ಬಹಿರಂಗಪಡಿಸುವುದಕ್ಕೆ ಅನುಮತಿ ನೀಡಬಹುದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಯಾವುದೇ ಮಾಹಿತಿಯ ಅಥವಾ ದಾಖಲೆಯ ಅಥವಾ ಅದರ ಭಾಗದ ಸಂಬಂಧದಲ್ಲಿ ಮೂರನೆಯ ಪಕ್ಷಕಾರನಿಗೆ (1)ನೇ ಉಪಪ್ರಕರಣದ ಮೇರೆಗೆ ನೋಟೀಸನ್ನು ಜಾರಿ ಮಾಡಿರುವಲ್ಲಿ, ಅಂಥ ನೋಟೀಸನ್ನು ಸ್ವೀಕರಿಸಿದ ದಿನಾಂಕದಿಂದ ಹತ್ತು ದಿವಸಗಳೊಳಗೆ ಉದ್ದೇಶಿತ ಬಹಿರಂಗಪಡಿಸುವಿಕೆಯ ವಿರುದ್ಧ ಮನವಿಯನ್ನು ಸಲ್ಲಿಸಲು ಮೂರನೆಯ ಪಕ್ಷಕಾರನಿಗೆ ಅವಕಾಶ ನೀಡತಕ್ಕದ್ದು.

(3) 7ನೇ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, (2)ನೇ ಉಪಪ್ರಕರಣದ ಅಡಿಯಲ್ಲಿ ಮನವಿಯನ್ನು ಸಲ್ಲಿಸಲು ಮೂರನೆಯ ಪಕ್ಷಕಾರನಿಗೆ ಅವಕಾಶ ನೀಡಿದ್ದರೆ, 6ನೇ ಪ್ರಕರಣದ ಅಡಿಯಲ್ಲಿ ಸಲ್ಲಿಸಿದ ಕೋರಿಕೆಯನ್ನು ಸ್ವೀಕರಿಸಿದ ನಂತರ ನಲವತ್ತು ದಿವಸಗಳೊಳಗಾಗಿ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸಬೇಕೆ ಅಥವಾ ಬಹಿರಂಗಪಡಿಸಬೇಡವೇ ಎಂಬ ಬಗ್ಗೆ ತೀರ್ಮಾನಿಸತಕ್ಕದ್ದು ಮತ್ತು ತನ್ನ ತೀರ್ಮಾನವನ್ನು ತಿಳಿಸುವ ಲಿಖಿತ ನೋಟೀಸನ್ನು ಮೂರನೆಯ ಪಕ್ಷಕಾರನಿಗೆ ನೀಡತಕ್ಕದ್ದು.

(4) (3)ನೇ ಉಪಪ್ರಕರಣದ ಅಡಿಯಲ್ಲಿ ನೀಡಲಾದ ನೋಟೀಸಿನಲ್ಲಿ ಯಾರಿಗೆ ನೋಟಿಸನ್ನು ನೀಡಲಾಗಿದೆಯೋ ಅಂಥ ಮೂರನೇ ಪಕ್ಷಕಾರನು ಆ ತೀರ್ಮಾನದ ವಿರುದ್ಧ 19ನೇ ಪ್ರಕರಣದ ಮೇರೆಗೆ ಅಪೀಲು ಸಲ್ಲಿಸಲು ಹಕ್ಕುಳ್ಳವನಾಗಿರುತ್ತಾನೆ ಎಂಬ ಹೇಳಿಕೆಯನ್ನು ಒಳಗೊಂಡಿರತಕ್ಕದ್ದು.

## ಅಧ್ಯಾಯ –- III

## ಕೇಂದ್ರ ಮಾಹಿತಿ ಆಯೋಗ

**12. ಕೇಂದ್ರ ಮಾಹಿತಿ ಆಯೋಗದ ರಚನೆ.–** (1) ಕೇಂದ್ರ ಸರ್ಕಾರವು, ಸರ್ಕಾರಿ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಮೇರೆಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ಮತ್ತು ವಹಿಸಿದ ಪ್ರಕಾರ್ಯಗಳನ್ನು ನಿರ್ವಹಿಸಲು ಕೇಂದ್ರ ಮಾಹಿತಿ ಆಯೋಗ ಎಂಬ ಹೆಸರಿನ ಸಂಸ್ಥೆಯನ್ನು ರಚಿಸತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗವು,–

(ಎ) ಮುಖ್ಯ ಮಾಹಿತಿ ಆಯುಕ್ತನನ್ನು; ಮತ್ತು

(ಬಿ) ಅವಶ್ಯವೆಂದು ಭಾವಿಸಬಹುದಾದಂಥ ಹತ್ತಕ್ಕೆ ಮೀರದಷ್ಟು ಸಂಖ್ಯೆಯ ಕೇಂದ್ರ ಮಾಹಿತಿ ಆಯುಕ್ತರುಗಳನ್ನು

– ಒಳಗೊಂಡಿರತಕ್ಕದ್ದು.

(3) ಮುಖ್ಯ ಮಾಹಿತಿ ಆಯುಕ್ತ ಹಾಗೂ ಮಾಹಿತಿ ಆಯುಕ್ತರುಗಳನ್ನು,–

(i) ಪ್ರಧಾನ ಮಂತ್ರಿ, ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು;

(ii) ಲೋಕಸಭೆಯಲ್ಲಿನ ವಿರೋಧಪಕ್ಷದ ನಾಯಕ; ಮತ್ತು

(iii) ಪ್ರಧಾನ ಮಂತ್ರಿಯು ನಾಮನಿರ್ದೇಶಿಸುವಂಥ ಕೇಂದ್ರ ಸಚಿವ ಸಂಪುಟ ದರ್ಜೆಯ ಸಚಿವ

– ಇವರನ್ನೊಳಗೊಂಡ ಸಮಿತಿಯ ಶಿಫಾರಸನ್ನು ಆಧರಿಸಿ ರಾಷ್ಟ್ರಪತಿಯವರು ನೇಮಕ ಮಾಡತಕ್ಕದ್ದು.

**ವಿವರಣೆ.–** ಸಂದೇಹಗಳ ನಿವಾರಣೆಯ ಉದ್ದೇಶಗಳಿಗಾಗಿ, ಲೋಕಸಭೆಯಲ್ಲಿ ವಿರೋಧಪಕ್ಷದ ನಾಯಕನನ್ನು ಆ ರೀತಿ ಮಾನ್ಯ ಮಾಡಿರದಿದ್ದಲ್ಲಿ ಲೋಕಸಭೆಯಲ್ಲಿನ ಸರ್ಕಾರದ ವಿರೋಧಪಕ್ಷಗಳಲ್ಲಿ ಅತ್ಯಂತ ಹೆಚ್ಚು ಸದಸ್ಯರನ್ನೊಳಗೊಂಡ ಒಂದು ಪಕ್ಷದ ನಾಯಕನನ್ನು ವಿರೋಧ ಪಕ್ಷದ ನಾಯಕನೆಂದು ಭಾವಿಸತಕ್ಕದ್ದು ಎಂಬುದಾಗಿ ಈ ಮೂಲಕ ಘೋಷಿಸಲಾಗಿದೆ.

(4) ಕೇಂದ್ರ ಮಾಹಿತಿ ಆಯೋಗದ ವ್ಯವಹಾರಗಳ ಸಾಮಾನ್ಯ ಉಸ್ತುವಾರಿ, ನಿರ್ದೇಶನ ಮತ್ತು ನಿರ್ವಹಣೆ ಮುಖ್ಯ ಮಾಹಿತಿ ಆಯುಕ್ತನಲ್ಲಿ ನಿಹಿತವಾಗಿರತಕ್ಕದ್ದು. ಅವನಿಗೆ ಮಾಹಿತಿ ಆಯುಕ್ತರುಗಳು ನೆರವು ನೀಡತಕ್ಕದ್ದು ಮತ್ತು ಅವನು ಯಾವುದೇ ಇತರ ಪ್ರಾಧಿಕಾರವು ಈ ಅಧಿನಿಯಮದ ಅಡಿಯಲ್ಲಿ ನೀಡುವ ನಿರ್ದೇಶನಗಳಿಗೆ ಒಳಪಡದೆ ಕೇಂದ್ರ ಮಾಹಿತಿ ಆಯೋಗವು ಚಲಾಯಿಸಬಹುದಾದಂಥ ಎಲ್ಲ ಅಧಿಕಾರಗಳನ್ನು ಮತ್ತು ನಿರ್ವಹಿಸಬಹುದಾದಂಥ ಎಲ್ಲ ಕಾರ್ಯಗಳನ್ನು ಮತ್ತು ವಿಷಯಗಳನ್ನು ಸ್ವತಂತ್ರವಾಗಿ ಚಲಾಯಿಸಬಹುದು ಮತ್ತು ನಿರ್ವಹಿಸಬಹುದು.

(5) ಮುಖ್ಯ ಮಾಹಿತಿ ಆಯುಕ್ತ ಹಾಗೂ ಮಾಹಿತಿ ಆಯುಕ್ತರುಗಳು ಕಾನೂನು, ವಿಜ್ಞಾನ ಮತ್ತು ತಂತ್ರಜ್ಞಾನ, ಸಮಾಜಸೇವೆ, ವ್ಯವಸ್ಥಾಪನೆ, ಪತ್ರಿಕೋದ್ಯಮ, ಸಮೂಹ ಮಾಧ್ಯಮ ಅಥವಾ ನಿರ್ವಹಣೆ ಮತ್ತು ಆಡಳಿತ ಈ ಕ್ಷೇತ್ರಗಳಲ್ಲಿ ಆಳವಾದ ಜ್ಞಾನ ಮತ್ತು ಅನುಭವವನ್ನು ಹೊಂದಿರುವುದರೊಂದಿಗೆ, ಸಾರ್ವಜನಿಕ ಜೀವನದಲ್ಲಿ ಖ್ಯಾತಿ ಪಡೆದ ವ್ಯಕ್ತಿಗಳಾಗಿರತಕ್ಕದ್ದು.

(6) ಮುಖ್ಯ ಮಾಹಿತಿ ಆಯುಕ್ತನು ಅಥವಾ ಸಂದರ್ಭಾನುಸಾರ, ಒಬ್ಬ ಮಾಹಿತಿ ಆಯುಕ್ತನು ಒಬ್ಬ ಸಂಸತ್ ಸದಸ್ಯ ಅಥವಾ ಯಾವುದೇ ರಾಜ್ಯದ ಅಥವಾ ಒಕ್ಕೂಟ ರಾಜ್ಯಕ್ಷೇತ್ರದ ವಿಧಾನಮಂಡಲದ ಸದಸ್ಯನಾಗಿರತಕ್ಕದ್ದಲ್ಲ, ಅಥವಾ ಯಾವುದೇ ಇತರ ಲಾಭದಾಯಕ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಪಕ್ಷದೊಂದಿಗೆ ಸಂಪರ್ಕ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ವ್ಯವಹಾರವನ್ನು ನಡೆಸತಕ್ಕದ್ದಲ್ಲ ಅಥವಾ ಯಾವುದೇ ವೃತ್ತಿಯನ್ನು ಅವಲಂಬಿಸಿರತಕ್ಕದ್ದಲ್ಲ.

(7) ಕೇಂದ್ರ ಮಾಹಿತಿ ಆಯೋಗದ ಕೇಂದ್ರ ಕಚೇರಿಯು ದೆಹಲಿಯಲ್ಲಿರತಕ್ಕದ್ದು. ಕೇಂದ್ರ ಮಾಹಿತಿ ಆಯೋಗವು, ಕೇಂದ್ರ ಸರ್ಕಾರದ ಪೂರ್ವ ಅನುಮೋದನೆಯೊಂದಿಗೆ ಭಾರತದ ಇತರ ಸ್ಥಳಗಳಲ್ಲಿ ಕಚೇರಿಗಳನ್ನು ಸ್ಥಾಪಿಸಬಹುದು.

**13. ಪದಾವಧಿ ಮತ್ತು ಸೇವಾ ಷರತ್ತುಗಳು.–** (1) ಮುಖ್ಯ ಮಾಹಿತಿ ಆಯುಕ್ತನು ತನ್ನ ಪದವನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು ಹಾಗೂ ಪುನರ್‌ನೇಮಕಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಯಾರೇ ಮಾಹಿತಿ ಆಯುಕ್ತನು ಆತನಿಗೆ ಅರವತ್ತೈದು ವರ್ಷ ವಯಸ್ಸಾದ ನಂತರ ಮಾಹಿತಿ ಆಯುಕ್ತನ ಪದಧಾರಣ ಮಾಡತಕ್ಕದ್ದಲ್ಲ.

(2) ಪ್ರತಿಯೊಬ್ಬ ಮಾಹಿತಿ ಆಯುಕ್ತನು ತನ್ನ ಪದವನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಅಥವಾ ಆತನಿಗೆ ಅರವತ್ತೈದು ವರ್ಷ ವಯಸ್ಸಾಗುವವರೆಗೆ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಪದಧಾರಣ ಮಾಡತಕ್ಕದ್ದು ಮತ್ತು ಅಂಥ ಮಾಹಿತಿ ಆಯುಕ್ತನಾಗಿ ಪುನರ್‌ನೇಮಕಗೊಳ್ಳುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಪ್ರತಿಯೊಬ್ಬ ಮಾಹಿತಿ ಆಯುಕ್ತನು ಈ ಉಪಪ್ರಕರಣದ ಮೇರೆಗೆ ತನ್ನ ಪದವನ್ನು ತೆರವುಗೊಳಿಸಿದ ನಂತರ 12ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಳ್ಳಲು ಅರ್ಹನಾಗಿರತಕ್ಕದ್ದು:

ಮತ್ತೂ ಪರಂತು, ಮಾಹಿತಿ ಆಯುಕ್ತನನ್ನು ಮುಖ್ಯ ಮಾಹಿತಿ ಆಯುಕ್ತನನ್ನಾಗಿ ನೇಮಕ ಮಾಡಿರುವಲ್ಲಿ, ಆತನ ಪದಾವಧಿಯು ಮಾಹಿತಿ ಆಯುಕ್ತ ಮತ್ತು ಮುಖ್ಯ ಮಾಹಿತಿ ಆಯುಕ್ತನಾಗಿ ಒಟ್ಟು ಐದು ವರ್ಷಗಳನ್ನು ಮೀರತಕ್ಕದ್ದಲ್ಲ.

(3) ಮುಖ್ಯ ಮಾಹಿತಿ ಆಯುಕ್ತನು ಅಥವಾ ಒಬ್ಬ ಮಾಹಿತಿ ಆಯುಕ್ತನು ತನ್ನ ಪದವನ್ನು ವಹಿಸಿಕೊಳ್ಳುವುದಕ್ಕೆ ಮೊದಲು, ಪ್ರಮಾಣ ಅಥವಾ ದೃಢೀಕರಣದ ಉದ್ದೇಶಕ್ಕಾಗಿ ಮೊದಲನೇ ಅನುಸೂಚಿಯಲ್ಲಿ ರೂಪಿಸಿರುವ ನಮೂನೆಗೆ ಅನುಸಾರವಾಗಿ ರಾಷ್ಟ್ರಪತಿಯ ಅಥವಾ ಆ ಸಂಬಂಧ ರಾಷ್ಟ್ರಪತಿಯವರಿಂದ ನೇಮಕಗೊಂಡ ಇತರ ವ್ಯಕ್ತಿಯ ಮುಂದೆ ಪ್ರಮಾಣ ಅಥವಾ ದೃಢೀಕರಣ ಮಾಡಿ, ಅದಕ್ಕೆ ರುಜುಮಾಡತಕ್ಕದ್ದು.

(4) ಮುಖ್ಯ ಮಾಹಿತಿ ಆಯುಕ್ತ ಅಥವಾ ಮಾಹಿತಿ ಆಯುಕ್ತನು ಯಾವುದೇ ಸಮಯದಲ್ಲಿ, ಬರೆದು ತಾನು ಸಹಿ ಹಾಕಿರುವ ರಾಜೀನಾಮೆ ಪತ್ರವನ್ನು ರಾಷ್ಟ್ರಪತಿಗೆ ಸಲ್ಲಿಸುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು:

ಪರಂತು, 14ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ತೆಗೆದುಹಾಕಬಹುದು.

(5) (ಎ) ಮುಖ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು, ಮುಖ್ಯ ಚುನಾವಣಾ ಆಯುಕ್ತನ ಸಂಬಳ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು;

(ಬಿ) ಒಬ್ಬ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ವೇತನ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಚುನಾವಣಾ ಆಯುಕ್ತನ ಸಂಬಳ ಮತ್ತು ಭತ್ಯೆಗಳು ಹಾಗೂ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು:

ಪರಂತು, ಮುಖ್ಯ ಮಾಹಿತಿ ಆಯುಕ್ತನು ಅಥವಾ ಮಾಹಿತಿ ಆಯುಕ್ತನು ಆತನ ನೇಮಕಾತಿಯ ಸಮಯದಲ್ಲಿ ಭಾರತ ಸರ್ಕಾರದ ಅಡಿಯಲ್ಲಿ ಅಥವಾ ರಾಜ್ಯ ಸರ್ಕಾರದಡಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ವೇತನವನ್ನು, ಅಶಕ್ತತೆ ಅಥವಾ ಗಾಯದ ನಿವೃತ್ತಿ ವೇತನವನ್ನು ಹೊರತುಪಡಿಸಿ ಪಡೆಯುತ್ತಿದ್ದರೆ, ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಮಾಹಿತಿ ಆಯುಕ್ತನಾಗಿ ಸಲ್ಲಿಸುತ್ತಿರುವ ಸೇವೆಗೆ ಸಂಬಂಧಪಟ್ಟಂತೆ ಆತನ ಸಂಬಳದಲ್ಲಿ, ಪರಿವರ್ತಿಸಿದ ನಿವೃತ್ತಿ ವೇತನದ ಯಾವುದೇ ಭಾಗವನ್ನೊಳಗೊಂಡಂತೆ ಆ ನಿವೃತ್ತಿ ವೇತನದಷ್ಟು ಹಾಗೂ ನಿವೃತ್ತಿ ಉಪಾದಾನಕ್ಕೆ ಸಮಾನವಾದ ನಿವೃತ್ತಿ ವೇತನವನ್ನು ಹೊರತುಪಡಿಸಿ ಇತರ ರೀತಿಯ ನಿವೃತ್ತಿ ಪ್ರಯೋಜನಗಳಿಗೆ ಸಮಾನವಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿತಗೊಳಿಸತಕ್ಕದ್ದು:

ಮತ್ತೂ ಪರಂತು, ಮುಖ್ಯ ಮಾಹಿತಿ ಆಯುಕ್ತನು ಅಥವಾ ಮಾಹಿತಿ ಆಯುಕ್ತನು, ತನ್ನ ನೇಮಕಾತಿಯ ಸಮಯದಲ್ಲಿ ಯಾವುದೇ ಕೇಂದ್ರ ಅಧಿನಿಯಮದಿಂದ ಅಥವಾ ರಾಜ್ಯ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ನಿಗಮದಲ್ಲಿ ಅಥವಾ ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಒಡೆತನದಲ್ಲಿ ಅಥವಾ ನಿಯಂತ್ರಣದಲ್ಲಿ ಇರುವ ಸರ್ಕಾರಿ ಕಂಪನಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ಪ್ರಯೋಜನಗಳನ್ನು ಪಡೆಯುತ್ತಿದ್ದರೆ, ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಮಾಹಿತಿ ಆಯುಕ್ತನಾಗಿ ಸಲ್ಲಿಸುವ ಸೇವೆಯ ಸಂಬಂಧದಲ್ಲಿ ಅವನ ಸಂಬಳದಲ್ಲಿ ನಿವೃತ್ತಿ ಪ್ರಯೋಜನಗಳಿಗೆ ಸಮನಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿತಗೊಳಿಸತಕ್ಕದ್ದು:

ಮತ್ತೂ ಪರಂತು, ಮುಖ್ಯ ಮಾಹಿತಿ ಆಯುಕ್ತನ ಮತ್ತು ಮಾಹಿತಿ ಆಯುಕ್ತರುಗಳ ಸಂಬಳಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳನ್ನು ಅವರನ್ನು ನೇಮಕ ಮಾಡಿದ ನಂತರ ಅವರಿಗೆ ಅನಾನುಕೂಲವಾಗುವ ರೀತಿಯಲ್ಲಿ ವ್ಯತ್ಯಸ್ತಗೊಳಿಸತಕ್ಕದ್ದಲ್ಲ.

(6) ಕೇಂದ್ರ ಸರ್ಕಾರವು, ಮುಖ್ಯ ಮಾಹಿತಿ ಆಯುಕ್ತ ಮತ್ತು ಮಾಹಿತಿ ಆಯುಕ್ತರುಗಳಿಗೆ ಈ ಅಧಿನಿಯಮದ ಅಡಿಯಲ್ಲಿ ತಮ್ಮ ಪ್ರಕಾರ್ಯಗಳ ದಕ್ಷ ನಿರ್ವಹಣೆಗಾಗಿ ಅವಶ್ಯವಾಗಬಹುದಾದಂಥ ಅಧಿಕಾರಿಗಳನ್ನು ಮತ್ತು ನೌಕರರನ್ನು ಒದಗಿಸತಕ್ಕದ್ದು ಮತ್ತು ಈ ಅಧಿನಿಯಮದ ಉದ್ದೇಶಕ್ಕಾಗಿ ನೇಮಕ ಮಾಡಲಾದ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡತಕ್ಕ ಸಂಬಳಗಳು ಮತ್ತು ಭತ್ಯೆಗಳು ಹಾಗೂ ಅವರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**14. ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ತೆಗೆದುಹಾಕುವುದು.–** (1) (3)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು, ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಯಾರೇ ಮಾಹಿತಿ ಆಯುಕ್ತನನ್ನು, ರಾಷ್ಟ್ರಪತಿಯು ಸರ್ವೋಚ್ಚ ನ್ಯಾಯಾಲಯಕ್ಕೆ ಮಾಡಿದ ಉಲ್ಲೇಖದ ಮೇರೆಗೆ, ಸರ್ವೋಚ್ಚ ನ್ಯಾಯಾಲಯವು ವಿಚಾರಣೆ ನಡೆಸಿದ ತರುವಾಯ, ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಸಂದರ್ಭಾನುಸಾರ, ಯಾರೇ ಮಾಹಿತಿ ಆಯುಕ್ತನನ್ನು ರುಜುವಾತಾದ ದುರ್ವರ್ತನೆ ಅಥವಾ ಅಸಮರ್ಥತೆಯ ಕಾರಣದ ಮೇಲೆ ತೆಗೆದು ಹಾಕಬೇಕೆಂದು ವರದಿ ಮಾಡಿದ ತರುವಾಯ, ಆ ಕಾರಣದ ಮೇಲೆ ರಾಷ್ಟ್ರಪತಿಯ ಆದೇಶದ ಮೂಲಕ ಮಾತ್ರ ಅವನನ್ನು ಪದದಿಂದ ತೆಗೆದುಹಾಕತಕ್ಕದ್ದು.

(2) ರಾಷ್ಟ್ರಪತಿಯು, ಯಾರ ಸಂಬಂಧದಲ್ಲಿ (1)ನೇ ಉಪಪ್ರಕರಣದ ಮೇರೆಗೆ ಸರ್ವೋಚ್ಚ ನ್ಯಾಯಾಲಯಕ್ಕೆ ಉಲ್ಲೇಖವನ್ನು ಮಾಡಿದ್ದಾರೆಯೋ ಆ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ಅಂಥ ಉಲ್ಲೇಖವನ್ನು ಕುರಿತಂತೆ ಸರ್ವೋಚ್ಚ ನ್ಯಾಯಾಲಯದ ವರದಿಯನ್ನು ಸ್ವೀಕರಿಸಿದ ನಂತರ ರಾಷ್ಟ್ರಪತಿಯು ಆದೇಶಗಳನ್ನು ಹೊರಡಿಸುವವರೆಗೆ ಪದದಿಂದ ಅಮಾನತು ಮಾಡಬಹುದು ಮತ್ತು ಅವಶ್ಯವೆಂದು ಭಾವಿಸಿದರೆ ವಿಚಾರಣೆಯ ಅವಧಿಯಲ್ಲಿ ಕಚೇರಿಗೆ ಹಾಜರಾಗುವುದನ್ನು ಸಹ ನಿಷೇಧಿಸಬಹುದು.

(3) (1)ನೇ ಉಪಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಮುಖ್ಯ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ ಮಾಹಿತಿ ಆಯುಕ್ತನು,–

(ಎ) ದಿವಾಳಿ ಎಂದು ನ್ಯಾಯ ನಿರ್ಣೀತನಾಗಿದ್ದರೆ; ಅಥವಾ

(ಬಿ) ನೈತಿಕ ಅಧಃಪತನವನ್ನೊಳಗೊಂಡ ಅಪರಾಧದ ನಿರ್ಣೀತ ಅಪರಾಧಿಯಾಗಿದ್ದಾನೆಂದು ರಾಷ್ಟ್ರಪತಿಯು ಅಭಿಪ್ರಾಯಪಟ್ಟರೆ; ಅಥವಾ

(ಸಿ) ತನ್ನ ಪದಾವಧಿಯಲ್ಲಿ, ತನ್ನ ಪದದ ಕರ್ತವ್ಯಗಳಲ್ಲದೆ ವೇತನ ಪಡೆಯುವ ಬೇರೆ ಯಾವುದೇ ಉದ್ಯೋಗದಲ್ಲಿ ತೊಡಗಿದ್ದರೆ; ಅಥವಾ

(ಡಿ) ಮಾನಸಿಕ ಅಥವಾ ದೈಹಿಕ ದೌರ್ಬಲ್ಯದ ಕಾರಣದಿಂದ ಪದದಲ್ಲಿ ಮುಂದುವರಿಯುವುದಕ್ಕೆ ಅನರ್ಹನಾಗಿದ್ದಾನೆಂದು ರಾಷ್ಟ್ರಪತಿಯು ಅಭಿಪ್ರಾಯಪಟ್ಟರೆ; ಅಥವಾ

(ಇ) ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಮಾಹಿತಿ ಆಯುಕ್ತನಾಗಿ ತನ್ನ ಕಾರ್ಯಗಳಿಗೆ ಪ್ರತಿಕೂಲ ಪರಿಣಾಮವನ್ನುಂಟು ಮಾಡುವ ಸಂಭವವಿರುವಂಥ ಹಣಕಾಸು ಅಥವಾ ಇತರ ಹಿತಾಸಕ್ತಿಯನ್ನು ಹೊಂದಿದ್ದರೆ

– ರಾಷ್ಟ್ರಪತಿಯು ಆದೇಶದ ಮೂಲಕ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ಪದದಿಂದ ತೆಗೆದುಹಾಕಬಹುದು.

(4) ಮುಖ್ಯ ಮಾಹಿತಿ ಆಯುಕ್ತ ಅಥವಾ ಮಾಹಿತಿ ಆಯುಕ್ತನು, ಭಾರತ ಸರ್ಕಾರವು ಅಥವಾ ಭಾರತ ಸರ್ಕಾರದ ಪರವಾಗಿ ಮಾಡಿಕೊಂಡ ಯಾವುದೇ ಕರಾರಿನಲ್ಲಿ ಅಥವಾ ಒಪ್ಪಂದದಲ್ಲಿ ಯಾವುದೇ ರೀತಿಯ ಸಂಬಂಧ ಹೊಂದಿದ್ದರೆ ಅಥವಾ ಹಿತಾಸಕ್ತಿ ಹೊಂದಿದ್ದರೆ ಅಥವಾ ಒಂದು ನಿಗಮಿತ ಕಂಪನಿಯ ಒಬ್ಬ ಸದಸ್ಯನಾಗಿಯಲ್ಲದೆ ಮತ್ತು ಅದರ ಇತರ ಸದಸ್ಯರೊಡನೆ ಒಬ್ಬನಾಗಿಯಲ್ಲದೆ ಅನ್ಯಥಾ ಅದರ ಲಾಭದಲ್ಲಿ ಅಥವಾ ಅದರಿಂದ ಬರುವ ಯಾವುದೇ ಪ್ರಯೋಜನದಲ್ಲಿ ಅಥವಾ ಉಪಲಬ್ಧಿಗಳಲ್ಲಿ ಯಾವುದೇ ರೀತಿಯಲ್ಲಿ ಭಾಗಿಯಾಗಿದ್ದರೆ, (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ಆತನನ್ನು ದುರ್ವರ್ತನೆಯ ತಪ್ಪಿತಸ್ಥನೆಂದು ಭಾವಿಸತಕ್ಕದ್ದು.

## ಅಧ್ಯಾಯ – IV

## ರಾಜ್ಯ ಮಾಹಿತಿ ಆಯೋಗ

**15. ರಾಜ್ಯ ಮಾಹಿತಿ ಆಯೋಗದ ರಚನೆ.–** (1) ಪ್ರತಿಯೊಂದು ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಈ ಅಧಿನಿಯಮದ ಅಡಿಯಲ್ಲಿ ಅದಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ಮತ್ತು ಅದಕ್ಕೆ ವಹಿಸಿದ ಕಾರ್ಯಗಳನ್ನು ನಿರ್ವಹಿಸಲು . . . . . . . . . . . (ರಾಜ್ಯದ ಹೆಸರು) ಮಾಹಿತಿ ಆಯೋಗ ಎಂಬ ಹೆಸರಿನ ಸಂಸ್ಥೆಯನ್ನು ರಚಿಸತಕ್ಕದ್ದು.

(2) ರಾಜ್ಯದ ಮಾಹಿತಿ ಆಯೋಗವು,–

(ಎ) ರಾಜ್ಯದ ಮುಖ್ಯ ಮಾಹಿತಿ ಆಯುಕ್ತನನ್ನು; ಮತ್ತು

(ಬಿ) ಅಗತ್ಯವೆಂದು ಭಾವಿಸಬಹುದಾದಂತೆ ಹತ್ತಕ್ಕೆ ಮೀರದಷ್ಟು ಸಂಖ್ಯೆಯ ರಾಜ್ಯ ಮಾಹಿತಿ ಆಯಕ್ತರುಗಳನ್ನು

– ಒಳಗೊಂಡಿರತಕ್ಕದ್ದು.

(3) ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳನ್ನು,–

(i) ಮುಖ್ಯಮಂತ್ರಿ, ಇವರು ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು;

(ii) ವಿಧಾನ ಸಭೆಯಲ್ಲಿನ ವಿರೋಧ ಪಕ್ಷದ ನಾಯಕ; ಮತ್ತು

(iii) ಮುಖ್ಯಮಂತ್ರಿಯಿಂದ ನಾಮನಿರ್ದೇಶಿತನಾದ ಸಚಿವ ಸಂಪುಟ ದರ್ಜೆಯ ಒಬ್ಬ ಸಚಿವ

– ಇವರನ್ನೊಳಗೊಂಡ ಸಮಿತಿಯ ಶಿಫಾರಸನ್ನು ಆಧರಿಸಿ ರಾಜ್ಯಪಾಲರು ನೇಮಕ ಮಾಡತಕ್ಕದ್ದು.

**ವಿವರಣೆ.–** ಸಂದೇಹಗಳ ನಿವಾರಣೆಯ ಉದ್ದೇಶಗಳಿಗಾಗಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕನನ್ನು ಆ ರೀತಿ ಮಾನ್ಯ ಮಾಡಿರದಿದ್ದಲ್ಲಿ ವಿಧಾನ ಸಭೆಯಲ್ಲಿ ಸರ್ಕಾರದ ವಿರೋಧ ಪಕ್ಷಗಳಲ್ಲಿ ಅತ್ಯಂತ ಹೆಚ್ಚು ಸದಸ್ಯರನ್ನೊಳಗೊಂಡ ಒಂದು ಪಕ್ಷದ ನಾಯಕನನ್ನು ವಿರೋಧ ಪಕ್ಷದ ನಾಯಕನೆಂದು ಭಾವಿಸತಕ್ಕದ್ದು ಎಂಬುದಾಗಿ ಈ ಮೂಲಕ ಘೋಷಿಸಲಾಗಿದೆ.

(4) ರಾಜ್ಯ ಮಾಹಿತಿ ಆಯೋಗದ ವ್ಯವಹಾರಗಳ ಸಾಮಾನ್ಯ ಉಸ್ತುವಾರಿ, ನಿರ್ದೇಶನ ಮತ್ತು ನಿರ್ವಹಣೆಯು ರಾಜ್ಯ ಮುಖ್ಯ ಮಾಹಿತಿ ಆಯುಕ್ತನಲ್ಲಿ ನಿಹಿತವಾಗಿರತಕ್ಕದ್ದು. ಅವನಿಗೆ ರಾಜ್ಯ ಮಾಹಿತಿ ಆಯುಕ್ತರುಗಳು ನೆರವು ನೀಡತಕ್ಕದ್ದು ಮತ್ತು ಅವನು ಯಾವುದೇ ಇತರ ಪ್ರಾಧಿಕಾರವು ಈ ಅಧಿನಿಯಮದಡಿಯಲ್ಲಿ ನೀಡುವ ನಿರ್ದೇಶನಗಳಿಗೆ ಒಳಪಡದೆ ರಾಜ್ಯ ಮಾಹಿತಿ ಆಯೋಗವು

ಚಲಾಯಿಸಬಹುದಾದಂಥ ಎಲ್ಲ ಅಧಿಕಾರಗಳನ್ನು ಚಲಾಯಿಸಬಹುದು ಮತ್ತು ನಿರ್ವಹಿಸಬಹುದಾದಂಥ ಎಲ್ಲ ಅಂಥ ಕಾರ್ಯಗಳನ್ನು ಮತ್ತು ವಿಷಯಗಳನ್ನು ಸ್ವತಂತ್ರವಾಗಿ ಚಲಾಯಿಸಬಹುದು ಮತ್ತು ನಿರ್ವಹಿಸಬಹುದು.

(5) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳು ಕಾನೂನು, ವಿಜ್ಞಾನ ಮತ್ತು ತಂತ್ರಜ್ಞಾನ, ಸಮಾಜ ಸೇವೆ, ವ್ಯವಸ್ಥಾಪನೆ, ಪತ್ರಿಕೋದ್ಯಮ, ಸಮೂಹ ಮಾಧ್ಯಮ ಅಥವಾ ನಿರ್ವಹಣೆ ಮತ್ತು ಆಡಳಿತದಲ್ಲಿ ಆಳವಾದ ಜ್ಞಾನ ಮತ್ತು ಅನುಭವ ಹೊಂದಿರುವುದರೊಂದಿಗೆ ಸಾರ್ವಜನಿಕ ಜೀವನದಲ್ಲಿ ಖ್ಯಾತಿ ಪಡೆದ ವ್ಯಕ್ತಿಗಳಾಗಿರತಕ್ಕದ್ದು.

(6) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ರಾಜ್ಯ ಮಾಹಿತಿ ಆಯುಕ್ತರುಗಳು, ಸಂಸತ್ತಿನ ಸದಸ್ಯರಾಗಿರತಕ್ಕದ್ದಲ್ಲ ಅಥವಾ ಯಾವುದೇ ರಾಜ್ಯದ ಅಥವಾ ಸಂದರ್ಭಾನುಸಾರ ಒಕ್ಕೂಟ ರಾಜ್ಯಕ್ಷೇತ್ರದ ವಿಧಾನಮಂಡಲದ ಸದಸ್ಯರಾಗಿರತಕ್ಕದ್ದಲ್ಲ ಅಥವಾ ಯಾವುದೇ ಇತರ ಲಾಭದಾಯಕ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಪಕ್ಷದೊಂದಿಗೆ ಸಂಪರ್ಕ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ವ್ಯವಹಾರವನ್ನು ನಡೆಸತಕ್ಕದ್ದಲ್ಲ ಅಥವಾ ಯಾವುದೇ ವೃತ್ತಿಯನ್ನು ಅವಲಂಬಿಸಿರತಕ್ಕದ್ದಲ್ಲ.

(7) ರಾಜ್ಯ ಮಾಹಿತಿ ಆಯೋಗದ ಕೇಂದ್ರ ಕಚೇರಿಯು, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ರಾಜ್ಯದಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಯಾವುದೇ ಸ್ಥಳದಲ್ಲಿರತಕ್ಕದ್ದು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ರಾಜ್ಯ ಮಾಹಿತಿ ಆಯೋಗವು, ರಾಜ್ಯದ ಇತರ ಸ್ಥಳಗಳಲ್ಲಿ ಕಚೇರಿಗಳನ್ನು ಸ್ಥಾಪಿಸಬಹುದು.

**16. ಪದಾವಧಿ ಮತ್ತು ಸೇವಾ ಷರತ್ತುಗಳು.–** (1) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು, ತಾನು ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು ಮತ್ತು ಪುನರ್ ನೇಮಕಾತಿಗೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಯಾರೇ ರಾಜ್ಯ ಮುಖ್ಯ ಮಾಹಿತಿ ಆಯುಕ್ತನು, ತನಗೆ ಅರವತ್ತೈದು ವರ್ಷ ವಯಸ್ಸಾದ ನಂತರ ಪದಧಾರಣವನ್ನು ಮಾಡತಕ್ಕದ್ದಲ್ಲ.

(2) ಪ್ರತಿಯೊಬ್ಬ ರಾಜ್ಯ ಮಾಹಿತಿ ಆಯುಕ್ತನು, ತಾನು ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಯವರೆಗೆ ಅಥವಾ ಆತನಿಗೆ ಅರವತ್ತೈದು ವರ್ಷ ವಯಸ್ಸಾಗುವವರೆಗಿನ ಅವಧಿಯವರೆಗೆ, ಇವುಗಳಲ್ಲಿ ಯಾವುದು ಮೊದಲೋ ಆ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು ಮತ್ತು ಅಂಥ ರಾಜ್ಯ ಮಾಹಿತಿ ಆಯುಕ್ತನಾಗಿ ಪುನರ್ ನೇಮಕಗೊಳ್ಳುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಪ್ರತಿಯೊಬ್ಬ ರಾಜ್ಯ ಮಾಹಿತಿ ಆಯುಕ್ತನು, ಈ ಉಪಪ್ರಕರಣದಡಿಯಲ್ಲಿ ಆತನ ಪದವನ್ನು ತೆರವುಗೊಳಿಸಿದ ನಂತರ, 15ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಳ್ಳಲು ಅರ್ಹನಾಗಿರತಕ್ಕದ್ದು:

ಮತ್ತು ಪರಂತು, ರಾಜ್ಯ ಮಾಹಿತಿ ಆಯುಕ್ತನನ್ನು, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನಾಗಿ ನೇಮಕ ಮಾಡಿರುವಲ್ಲಿ, ಆತನ ಪದಾವಧಿಯು, ರಾಜ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಒಟ್ಟು ಐದು ವರ್ಷಗಳನ್ನು ಮೀರತಕ್ಕದ್ದಲ್ಲ.

(3) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ರಾಜ್ಯ ಮಾಹಿತಿ ಆಯುಕ್ತನು, ತಾನು ಪದವನ್ನು ವಹಿಸಿಕೊಳ್ಳುವುದಕ್ಕೆ ಮೊದಲು, ರಾಜ್ಯಪಾಲರ ಅಥವಾ ಈ ಬಗ್ಗೆ ರಾಜ್ಯಪಾಲರಿಂದ ನಿಯೋಜಿತರಾದ ಯಾರೇ ಇತರ ವ್ಯಕ್ತಿಯ ಮುಂದೆ, ಪ್ರಮಾಣ ಅಥವಾ ದೃಢೀಕರಣದ ಉದ್ದೇಶಕ್ಕಾಗಿ ಮೊದಲನೇ ಅನುಸೂಚಿಯಲ್ಲಿ ರೂಪಿಸಲಾದ ನಮೂನೆಯಲ್ಲಿರುವಂತೆ ಪ್ರಮಾಣವನ್ನು ಅಥವಾ ದೃಢೀಕರಣವನ್ನು ಮಾಡಿ ಅದಕ್ಕೆ ರುಜುಮಾಡತಕ್ಕದ್ದು.

(4) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ರಾಜ್ಯ ಮಾಹಿತಿ ಆಯುಕ್ತನು, ಯಾವುದೇ ಸಮಯದಲ್ಲಿ ಬರೆದು ತಾನು ಸಹಿ ಹಾಕಿರುವ ರಾಜಿನಾಮೆ ಪತ್ರವನ್ನು ರಾಜ್ಯಪಾಲರಿಗೆ ಸಲ್ಲಿಸುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ಸಲ್ಲಿಸಬಹುದು:

ಪರಂತು, 17ನೇ ಪ್ರಕರಣದಡಿಯಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು ತೆಗೆದುಹಾಕಬಹುದು.

(5) (ಎ) ರಾಜ್ಯ ಮುಖ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ಚುನಾವಣಾ ಆಯುಕ್ತನ ಸಂಬಳ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳಂತೆಯೇ ಇರತಕ್ಕದ್ದು;

(ಬಿ) ರಾಜ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯ ಸಂಬಳ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು:

ಪರಂತು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು, ತನ್ನ ನೇಮಕಾತಿಯ ಸಮಯದಲ್ಲಿ, ಭಾರತ ಸರ್ಕಾರದಡಿಯಲ್ಲಿ ಅಥವಾ ರಾಜ್ಯ ಸರ್ಕಾರದಡಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ವೇತನವನ್ನು, ಅಶಕ್ತತೆ ಅಥವಾ ಗಾಯದ ನಿವೃತ್ತಿ ವೇತನವನ್ನು ಹೊರತುಪಡಿಸಿ ಪಡೆಯುತ್ತಿದ್ದರೆ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ರಾಜ್ಯ ಮಾಹಿತಿ ಆಯುಕ್ತನಾಗಿ ಸೇವೆ ಸಲ್ಲಿಸುತ್ತಿರುವುದಕ್ಕೆ ಸಂಬಂಧಿಸಿದಂತೆ ಆತನ ಸಂಬಳದಲ್ಲಿ ಪರಿವರ್ತಿಸಿದ ನಿವೃತ್ತಿ ವೇತನದ ಯಾವುದೇ ಭಾಗವನ್ನೊಳಗೊಂಡಂತೆ ಆ ನಿವೃತ್ತಿ ವೇತನದಷ್ಟು ಹಾಗೂ ನಿವೃತ್ತಿ ಉಪಾದಾನಕ್ಕೆ ಸಮನಾದ ನಿವೃತ್ತಿ ವೇತನವನ್ನು ಹೊರತುಪಡಿಸಿ ಇತರ ರೀತಿಯ ನಿವೃತ್ತಿ ಪ್ರಯೋಜನಗಳಿಗೆ ಸಮನಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿತಗೊಳಿಸತಕ್ಕದ್ದು:

ಮತ್ತು ಪರಂತು, ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ರಾಜ್ಯ ಮಾಹಿತಿ ಆಯುಕ್ತನು ಆತನ ನೇಮಕದ ಸಮಯದಲ್ಲಿ, ಯಾವುದೇ ಕೇಂದ್ರ ಅಧಿನಿಯಮದ ಅಥವಾ ರಾಜ್ಯ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ನಿಗಮದಲ್ಲಿ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನಕ್ಕೆ ಅಥವಾ ನಿಯಂತ್ರಣಕ್ಕೆ ಒಳಪಟ್ಟ ಸರ್ಕಾರಿ ಕಂಪನಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ಸೌಲಭ್ಯಗಳನ್ನು ಸ್ವೀಕರಿಸುತ್ತಿದ್ದರೆ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ರಾಜ್ಯ ಮಾಹಿತಿ ಆಯುಕ್ತನಾಗಿ ಸೇವೆ ಸಲ್ಲಿಸುತ್ತಿರುವುದಕ್ಕೆ ಸಂಬಂಧಿಸಿದಂತೆ ಆತನಿಗೆ ನೀಡುವ ಸಂಬಳದಲ್ಲಿ ನಿವೃತ್ತಿ ಪ್ರಯೋಜನಗಳಿಗೆ ಸಮನಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿತಗೊಳಿಸತಕ್ಕದ್ದು:

ಮತ್ತೂ ಪರಂತು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳ ಸಂಬಳಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳನ್ನು ಅವರನ್ನು ನೇಮಕ ಮಾಡಿದ ನಂತರ ಅವರಿಗೆ ಅನಾನುಕೂಲವಾಗುವಂತೆ ವ್ಯತ್ಯಸ್ತಗೊಳಿಸತಕ್ಕದ್ದಲ್ಲ.

(6) ರಾಜ್ಯ ಸರ್ಕಾರವು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳಿಗೆ, ಈ ಅಧಿನಿಯಮದಡಿಯಲ್ಲಿನ ತಮ್ಮ ಕಾರ್ಯಗಳ ದಕ್ಷ ನಿರ್ವಹಣೆಗಾಗಿ ಅವಶ್ಯವಾಗಬಹುದಾದಂಥ ಅಧಿಕಾರಿಗಳನ್ನು ಮತ್ತು ನೌಕರರನ್ನು ಒದಗಿಸತಕ್ಕದ್ದು, ಮತ್ತು ಈ ಅಧಿನಿಯಮದ ಉದ್ದೇಶಕ್ಕಾಗಿ ನೇಮಕ ಮಾಡಲಾದ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡತಕ್ಕ ಸಂಬಳಗಳು ಮತ್ತು ಭತ್ಯೆಗಳು ಹಾಗೂ ಅವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**17. ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತರನ್ನು ತೆಗೆದುಹಾಕುವುದು.–** (1) (3)ನೇ ಉಪ–ಪ್ರಕರಣದ ಉಪಬಂಧಗಳಿಗೊಳಪಟ್ಟು, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಯಾರೇ ರಾಜ್ಯ ಮಾಹಿತಿ ಆಯುಕ್ತನನ್ನು, ರಾಜ್ಯಪಾಲನು ಸರ್ವೋಚ್ಚ ನ್ಯಾಯಾಲಯಕ್ಕೆ ಮಾಡಿದ ಉಲ್ಲೇಖದ ಮೇರೆಗೆ, ಸರ್ವೋಚ್ಚ ನ್ಯಾಯಾಲಯವು, ವಿಚಾರಣೆ ನಡೆಸಿದ ತರುವಾಯ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಸಂದರ್ಭಾನುಸಾರ, ಯಾರೇ ರಾಜ್ಯ ಮಾಹಿತಿ ಆಯುಕ್ತನನ್ನು ರುಜುವಾತಾದ ದುರ್ವರ್ತನೆ ಅಥವಾ ಅಸಮರ್ಥತೆಯ ಕಾರಣದ ಮೇಲೆ ತೆಗೆದುಹಾಕಬೇಕೆಂದು ವರದಿ ಮಾಡಿದ ತರುವಾಯ, ಆ ಕಾರಣದ ಮೇಲೆ ರಾಜ್ಯಪಾಲರ ಆದೇಶದ ಮೂಲಕ ಮಾತ್ರವೇ ಆತನನ್ನು ಪದದಿಂದ ತೆಗೆದುಹಾಕತಕ್ಕದ್ದು.

(2) ರಾಜ್ಯಪಾಲರು, ಯಾರ ಸಂಬಂಧದಲ್ಲಿ (1)ನೇ ಉಪಪ್ರಕರಣದ ಮೇರೆಗೆ ಸರ್ವೋಚ್ಚ ನ್ಯಾಯಾಲಯಕ್ಕೆ ಉಲ್ಲೇಖವನ್ನು ಮಾಡಿದ್ದಾರೆಯೋ ಆ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು, ಅಂಥ ಉಲ್ಲೇಖದ ಬಗ್ಗೆ ಸರ್ವೋಚ್ಚ ನ್ಯಾಯಾಲಯದ ವರದಿಯನ್ನು ಸ್ವೀಕರಿಸಿದ ನಂತರ ರಾಜ್ಯಪಾಲನು ಆದೇಶಗಳನ್ನು ಹೊರಡಿಸುವವರೆಗೆ, ಪದದಿಂದ ಅವರನ್ನು ಅಮಾನತು ಮಾಡಬಹುದು ಮತ್ತು ಅವಶ್ಯವೆಂದು ಭಾವಿಸಿದರೆ ವಿಚಾರಣೆಯ ಅವಧಿಯಲ್ಲಿ ಕಚೇರಿಗೆ ಹಾಜರಾಗುವುದನ್ನೂ ಸಹ ನಿಷೇಧಿಸಬಹುದು.

(3) (1)ನೇ ಉಪಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯುಕ್ತನು,–

(ಎ) ದಿವಾಳಿ ಎಂದು ನ್ಯಾಯನಿರ್ಣೀತನಾಗಿದ್ದರೆ; ಅಥವಾ

(ಬಿ) ನೈತಿಕ ಅಧಃಪತನವನ್ನೊಳಗೊಂಡ ಅಪರಾಧದ ನಿರ್ಣೀತ ಅಪರಾಧಿಯಾಗಿರುವನೆಂದು ರಾಜ್ಯಪಾಲರು ಅಭಿಪ್ರಾಯಪಟ್ಟರೆ; ಅಥವಾ

(ಸಿ) ತನ್ನ ಪದಾವಧಿಯಲ್ಲಿ, ತನ್ನ ಪದದ ಕರ್ತವ್ಯಗಳಲ್ಲದೆ ವೇತನ ಪಡೆಯುವ ಬೇರೆ ಯಾವುದೇ ಉದ್ಯೋಗದಲ್ಲಿ ತೊಡಗಿದ್ದರೆ; ಅಥವಾ

(ಡಿ) ಮಾನಸಿಕ ಅಥವಾ ದೈಹಿಕ ದೌರ್ಬಲ್ಯದ ಕಾರಣದಿಂದ ಪದದಲ್ಲಿ ಮುಂದುವರಿಯುವುದಕ್ಕೆ ಅನರ್ಹನಾಗಿದ್ದಾನೆಂದು ರಾಜ್ಯಪಾಲರು ಅಭಿಪ್ರಾಯಪಟ್ಟರೆ; ಅಥವಾ

(ಇ) ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಒಬ್ಬ ರಾಜ್ಯ ಮಾಹಿತಿ ಆಯುಕ್ತನಾಗಿ ತನ್ನ ಪ್ರಕಾರ್ಯಗಳಿಗೆ ಪ್ರತಿಕೂಲ ಪರಿಣಾಮವನ್ನುಂಟು ಮಾಡುವ ಸಂಭವವಿರುವಂಥ ಹಣಕಾಸು ಅಥವಾ ಇತರ ಹಿತಾಸಕ್ತಿಯನ್ನು ಹೊಂದಿದ್ದರೆ

– ರಾಜ್ಯಪಾಲರು ಆದೇಶದ ಮೂಲಕ ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು ಪದದಿಂದ ತೆಗೆದುಹಾಕಬಹುದು.

(4) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ರಾಜ್ಯ ಮಾಹಿತಿ ಆಯುಕ್ತನು, ರಾಜ್ಯ ಸರ್ಕಾರವು ಅಥವಾ ರಾಜ್ಯ ಸರ್ಕಾರದ ಪರವಾಗಿ ಮಾಡಿಕೊಂಡ ಯಾವುದೇ ಕರಾರಿನಲ್ಲಿ ಅಥವಾ ಒಪ್ಪಂದದಲ್ಲಿ ಯಾವುದೇ ರೀತಿಯ ಸಂಬಂಧ ಹೊಂದಿದ್ದರೆ ಅಥವಾ ಹಿತಾಸಕ್ತಿ ಹೊಂದಿದ್ದರೆ ಅಥವಾ ಒಂದು ನಿಗಮಿತ ಕಂಪನಿಯ ಒಬ್ಬ ಸದಸ್ಯನಾಗಿಯಲ್ಲದೆ ಮತ್ತು ಅದರ ಇತರ ಸದಸ್ಯರೊಡನೆ ಒಬ್ಬನಾಗಿಯಲ್ಲದೆ ಅನ್ಯಥಾ ಅದರ ಲಾಭದಲ್ಲಿ ಅಥವಾ ಅದರಿಂದ ಬರುವ ಯಾವುದೇ ಪ್ರಯೋಜನದಲ್ಲಿ ಅಥವಾ ಉಪಲಬ್ಧಿಗಳಲ್ಲಿ ಯಾವುದೇ ರೀತಿಯಲ್ಲಿ ಭಾಗಿಯಾಗಿದ್ದರೆ, ಆತನನ್ನು, (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ದುರ್ವರ್ತನೆಯ ತಪ್ಪಿತಸ್ಥನೆಂದು ಭಾವಿಸತಕ್ಕದ್ದು.

## ಅಧ್ಯಾಯ –V

### ಮಾಹಿತಿ ಆಯೋಗಗಳ ಅಧಿಕಾರಗಳು ಮತ್ತು ಪ್ರಕಾರ್ಯಗಳು, ಅಪೀಲು ಮತ್ತು ದಂಡನೆಗಳು

**18. ಮಾಹಿತಿ ಆಯೋಗಗಳ ಅಧಿಕಾರಗಳು ಮತ್ತು ಪ್ರಕಾರ್ಯಗಳು.–** (1) ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು,–

(ಎ) ಈ ಅಧಿನಿಯಮದಡಿಯಲ್ಲಿ ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಂಥ ಯಾರೇ ಅಧಿಕಾರಿಯನ್ನು ನಿಯೋಜಿಸಲಾಗಿಲ್ಲವೆಂಬ ಕಾರಣದಿಂದ ಅಥವಾ 19ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಲಾದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಹಿರಿಯ ಅಧಿಕಾರಿಗೆ ಅಥವಾ ಕೇಂದ್ರ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯುಕ್ತನಿಗೆ ಅದನ್ನು ರವಾನಿಸುವುದಕ್ಕಾಗಿ ಈ ಅಧಿನಿಯಮದಡಿಯಲ್ಲಿ ಮಾಹಿತಿಗಾಗಿ ಸಲ್ಲಿಸಿದ ಆತನ ಅಥವಾ ಆಕೆಯ ಅರ್ಜಿಯನ್ನು ಅಥವಾ ಅಪೀಲನ್ನು ಸ್ವೀಕರಿಸಲು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಸಹಾಯಕ ಮಾಹಿತಿ ಅಧಿಕಾರಿಯು ನಿರಾಕರಿಸಿದನೆಂಬ ಕಾರಣದಿಂದ ಕೋರಿಕೆಯನ್ನು ಸಲ್ಲಿಸಲು ಯಾರಿಗೆ ಸಾಧ್ಯವಾಗಲ್ಲಿಲ್ಲವೋ;

(ಬಿ) ಈ ಅಧಿನಿಯಮದಡಿಯಲ್ಲಿ ಕೋರಲಾದ ಯಾವುದೇ ಮಾಹಿತಿ ಪಡೆಯಲು ಯಾರಿಗೆ ಅವಕಾಶವನ್ನು ನಿರಾಕರಿಸಲಾಗಿದೆಯೋ;

(ಸಿ) ಮಾಹಿತಿಗಾಗಿ ಮಾಡಿಕೊಂಡ ಮನವಿಗೆ ಈ ಅಧಿನಿಯಮದಡಿಯಲ್ಲಿ ನಿರ್ದಿಷ್ಟಪಡಿಸಲಾದ ಕಾಲಪರಿಮಿತಿಯೊಳಗೆ ಯಾವ ವ್ಯಕ್ತಿಗೆ ಉತ್ತರ ದೊರೆತಿಲ್ಲವೋ ಅಥವಾ ಮಾಹಿತಿಯನ್ನು ಒದಗಿಸಿಲ್ಲವೋ;

(ಡಿ) ಆತನು ಅಥವಾ ಆಕೆಯು ಅನುಚಿತವೆಂದು ಪರಿಗಣಿಸುವ ಶುಲ್ಕದ ಮೊತ್ತವನ್ನು ಸಂದಾಯ ಮಾಡುವಂತೆ ಯಾರಿಗೆ ಅಗತ್ಯಪಡಿಸಲಾಗಿದೆಯೋ;

(ಇ) ಈ ಅಧಿನಿಯಮದಡಿಯಲ್ಲಿ ಅಪೂರ್ಣ, ತಪ್ಪುದಾರಿಗೆ ಎಳೆಯುವ ಅಥವಾ ಸುಳ್ಳು ಮಾಹಿತಿಯನ್ನು ಆತನಿಗೆ ಅಥವಾ ಆಕೆಗೆ ನೀಡಿದ್ದಾರೆಂದು ನಂಬುವ; ಮತ್ತು

(ಎಫ್) ಈ ಅಧಿನಿಯಮದಡಿಯಲ್ಲಿ ದಾಖಲೆಗಳಿಗಾಗಿ ಕೋರುವುದಕ್ಕೆ ಅಥವಾ ದಾಖಲೆಗಳನ್ನು ಪಡೆಯುವುದಕ್ಕೆ ಸಂಬಂಧಿಸಿದ ಯಾವುದೇ ಇತರ ವಿಷಯದ ಸಂಬಂಧದಲ್ಲಿ

– ಆ ಯಾರೇ ವ್ಯಕ್ತಿಯಿಂದ ಫಿರ್ಯಾದನ್ನು ಸ್ವೀಕರಿಸಿ ವಿಚಾರಣೆ ನಡೆಸುವುದು ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ಕರ್ತವ್ಯವಾಗಿರತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಈ ವಿಷಯದ ಬಗ್ಗೆ ವಿಚಾರಣೆ ನಡೆಸುವುದಕ್ಕೆ ಸೂಕ್ತ ಕಾರಣಗಳಿವೆಯೆಂದು ಮನದಟ್ಟಾದರೆ, ಅದು ಆ ಸಂಬಂಧದಲ್ಲಿ ವಿಚಾರಣೆಯನ್ನು ಪ್ರಾರಂಭಿಸಬಹುದು.

(3) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ಪ್ರಕರಣದ ಅಡಿಯಲ್ಲಿ ಯಾವುದೇ ವಿಷಯದ ಬಗ್ಗೆ ವಿಚಾರಣೆಯನ್ನು ನಡೆಸುವಾಗ, ಈ ಮುಂದಿನ ವಿಷಯಗಳ ಸಂಬಂಧದಲ್ಲಿ ಸಿವಿಲ್ ಪ್ರಕ್ರಿಯಾ ಸಂಹಿತೆ, 1908ರ ಅಡಿಯಲ್ಲಿ ಹೂಡಿದ ದಾವೆಯ ಅಧಿವಿಚಾರಣೆ ಮಾಡುವಾಗ ಸಿವಿಲ್ ನ್ಯಾಯಾಲಯದಲ್ಲಿ ನಿಹಿತಗೊಳಿಸಲಾದಂತಹವೇ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ವ್ಯಕ್ತಿಗಳ ಹಾಜರಾತಿಗಾಗಿ ಸಮನು ಮಾಡುವುದು ಮತ್ತು ಅವರ ಹಾಜರಾತಿಯನ್ನು ಒತ್ತಾಯಿಸುವುದು ಹಾಗೂ ಪ್ರಮಾಣದ ಮೇಲೆ ಮೌಖಿಕ ಅಥವಾ ಲಿಖಿತ ಸಾಕ್ಷ್ಯವನ್ನು ನೀಡುವುದಕ್ಕೆ ಮತ್ತು ದಸ್ತಾವೇಜುಗಳು ಅಥವಾ ವಸ್ತುಗಳನ್ನು ಹಾಜರುಪಡಿಸುವುದಕ್ಕೆ ಅವರನ್ನು ಒತ್ತಾಯಿಸುವುದು;

(ಬಿ) ದಸ್ತಾವೇಜುಗಳ ಶೋಧನೆ ಮತ್ತು ಪರಿಶೀಲನೆಯನ್ನು ಅಗತ್ಯಪಡಿಸುವುದು;

(ಸಿ) ಅಫಿದಾವಿತ್ತಿನ ಮೇಲೆ ಸಾಕ್ಷ್ಯವನ್ನು ಸ್ವೀಕರಿಸುವುದು;

(ಡಿ) ಯಾವುದೇ ನ್ಯಾಯಾಲಯದಿಂದ ಅಥವಾ ಕಚೇರಿಯಿಂದ ಯಾವುದೇ ಸಾರ್ವಜನಿಕ ದಾಖಲೆ ಅಥವಾ ಅದರ ಪ್ರತಿಗಳನ್ನು ಕಡ್ಡಾಯವಾಗಿ ಕೋರುವುದು;

(ಇ) ಸಾಕ್ಷಿದಾರರ ಅಥವಾ ದಸ್ತಾವೇಜುಗಳ ಪರೀಕ್ಷೆಗಾಗಿ ಸಮನುಗಳನ್ನು ಹೊರಡಿಸುವುದು;

(ಎಫ್) ನಿಯಮಿಸಬಹುದಾದ ಯಾವುದೇ ಇತರ ವಿಷಯ.

(4) ಸಂಸತ್ತಿನ, ಅಥವಾ ಸಂದರ್ಭಾನುಸಾರ, ರಾಜ್ಯ ವಿಧಾನ ಮಂಡಲದ ಯಾವುದೇ ಇತರ ಅಧಿನಿಯಮದಲ್ಲಿ ಅಸಂಗತವಾದುದು ಏನೇ ಒಳಗೊಂಡಿದ್ದರೂ, ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ಅಧಿನಿಯಮದಡಿಯಲ್ಲಿ ಯಾವುದೇ ದೂರನ್ನು ವಿಚಾರಣೆ ಮಾಡುವ ಅವಧಿಯಲ್ಲಿ ಈ ಅಧಿನಿಯಮವು ಅನ್ವಯಿಸುವ ಸಾರ್ವಜನಿಕ ಪ್ರಾಧಿಕಾರದ ನಿಯಂತ್ರಣದಲ್ಲಿರುವ ಯಾವುದೇ ದಾಖಲೆಯನ್ನು ಪರೀಕ್ಷಿಸಬಹುದು ಮತ್ತು ಅಂಥ ದಾಖಲೆಯನ್ನು ಯಾವುವೇ ಕಾರಣಗಳ ಮೇಲೆ ಅದಕ್ಕೆ ದೊರೆಯದಂತೆ ತಡೆಹಿಡಿಯತಕ್ಕದ್ದಲ್ಲ.

**19. ಅಪೀಲು.–** (1) 7ನೇ ಪ್ರಕರಣದ (1)ನೇ ಉಪ–ಪ್ರಕರಣದಲ್ಲಿ ಅಥವಾ (3)ನೇ ಉಪಪ್ರಕರಣದ (ಎ) ಖಂಡದಲ್ಲಿ ನಿರ್ದಿಷ್ಟಪಡಿಸಲಾದ ಸಮಯದೊಳಗೆ ತೀರ್ಮಾನವನ್ನು ಸ್ವೀಕರಿಸದಿರುವಂಥ ಅಥವಾ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ತೀರ್ಮಾನದಿಂದ ಬಾಧಿತನಾದಂಥ ಯಾರೇ ವ್ಯಕ್ತಿಯು, ಅಂಥ ಅವಧಿಯು ಮುಕ್ತಾಯಗೊಂಡಂದಿನಿಂದ ಅಥವಾ ತೀರ್ಮಾನವನ್ನು ಸ್ವೀಕರಿಸಿದ ದಿನದಿಂದ ಮೂವತ್ತು ದಿನಗಳೊಳಗೆ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಿಂತ ಹಿರಿಯ ದರ್ಜೆಯ ಅಧಿಕಾರಿಗೆ ಅಪೀಲು ಸಲ್ಲಿಸಬಹುದು:

ಪರಂತು, ಅಪೀಲುದಾರನು, ಸಕಾಲದಲ್ಲಿ ಅಪೀಲು ಸಲ್ಲಿಸಲು ಸಾಕಷ್ಟು ಕಾರಣದಿಂದ ಅವನಿಗೆ ತಡೆವುಂಟಾಗಿತ್ತೆಂದು ಅಧಿಕಾರಿಗೆ ಮನದಟ್ಟಾದರೆ, ಅಂಥ ಅಧಿಕಾರಿಯು ಮೂವತ್ತು ದಿನಗಳ ಅವಧಿ ಮುಗಿದ ತರುವಾಯ ಅಪೀಲನ್ನು ಅಂಗೀಕರಿಸಬಹುದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಅಧಿಕಾರಿಯು ಮೂರನೇ ಪಕ್ಷಕಾರನ ಮಾಹಿತಿಯನ್ನು ಬಹಿರಂಗಪಡಿಸುವಂತೆ 11ನೇ ಪ್ರಕರಣದ ಮೇರೆಗೆ ಮಾಡಿದ ಆದೇಶದ ವಿರುದ್ಧ ಅಪೀಲು ಸಲ್ಲಿಸಿದಲ್ಲಿ, ಸಂಬಂಧಪಟ್ಟ ಮೂರನೇ ಪಕ್ಷಕಾರನು ಆದೇಶದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಪೀಲು ಸಲ್ಲಿಸತಕ್ಕದ್ದು.

(3) (1)ನೇ ಉಪಪ್ರಕರಣದ ಮೇರೆಗಿನ ತೀರ್ಮಾನದ ವಿರುದ್ಧ ಸಲ್ಲಿಸುವ ಎರಡನೇ ಅಪೀಲನ್ನು, ಕೇಂದ್ರ ಮಾಹಿತಿ ಆಯೋಗ ಅಥವಾ ರಾಜ್ಯ ಮಾಹಿತಿ ಆಯೋಗವು ತೀರ್ಮಾನವನ್ನು ಮಾಡಬೇಕಾಗಿದ್ದ ಅಥವಾ ಅದನ್ನು ವಾಸ್ತವವಾಗಿ ಸ್ವೀಕರಿಸಿದ ದಿನಾಂಕದಿಂದ ತೊಂಬತ್ತು ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು:

ಪರಂತು, ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಅಪೀಲುದಾರನು ಸಕಾಲದಲ್ಲಿ ಅಪೀಲನ್ನು ಸಲ್ಲಿಸಲು ಸಾಕಷ್ಟು ಕಾರಣದಿಂದ ತಡೆವುಂಟಾಗಿತ್ತೆಂದು

ಮನದಟ್ಟಾದರೆ, ತೊಂಭತ್ತು ದಿನಗಳ ಅವಧಿಯು ಮುಗಿದ ತರುವಾಯವೂ ಆ ಅಪೀಲನ್ನು ಅಂಗೀಕರಿಸಬಹುದು.

(4) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಡಿದ ಯಾವ ತೀರ್ಮಾನದ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಅದು ಮೂರನೆಯ ಪಕ್ಷಕಾರನ ಮಾಹಿತಿಗೆ ಸಂಬಂಧಿಸಿದ್ದರೆ, ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ಆ ಮೂರನೆ ಪಕ್ಷಕಾರನಿಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡತಕ್ಕದ್ದು.

(5) ಯಾವುವೇ ಅಪೀಲು ವ್ಯವಹರಣೆಗಳಲ್ಲಿ, ಕೋರಿಕೆಯ ನಿರಾಕರಣೆ ಸಮರ್ಥನೀಯವಾಗಿತ್ತು ಎಂಬುದನ್ನು ರುಜುವಾತುಪಡಿಸುವ ಹೊಣೆಯು, ಕೋರಿಕೆಯನ್ನು ನಿರಾಕರಿಸಿದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಮೇಲೆ ಇರತಕ್ಕದ್ದು.

(6) (1)ನೇ ಉಪಪ್ರಕರಣದ ಅಡಿಯಲ್ಲಿ ಅಥವಾ (2)ನೇ ಉಪ ಪ್ರಕರಣದ ಅಡಿಯಲ್ಲಿ ಸಲ್ಲಿಸಲಾದ ಅಪೀಲನ್ನು, ಅದನ್ನು ಸ್ವೀಕರಿಸಿದ ಮೂವತ್ತು ದಿನಗಳೊಳಗೆ ಅಥವಾ ಸಂದರ್ಭಾನುಸಾರ, ಅದನ್ನು ಸಲ್ಲಿಸಿದ ದಿನಾಂಕದಿಂದ ಒಟ್ಟು ನಲವತ್ತೈದು ದಿನಗಳನ್ನು ಮೀರದ ಹಾಗೆ ವಿಸ್ತರಿಸಿದ ಅವಧಿಯೊಳಗೆ ಲಿಖಿತದಲ್ಲಿ ಕಾರಣಗಳನ್ನು ದಾಖಲಿಸಿ ವಿಲೆ ಮಾಡತಕ್ಕದ್ದು.

(7) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ತೀರ್ಮಾನವು ಬಂಧನಕಾರಿಯಾಗಿರತಕ್ಕದ್ದು.

(8) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ತನ್ನ ತೀರ್ಮಾನದಲ್ಲಿ,–

(ಎ) ಈ ಅಧಿನಿಯಮದ ಉಪಬಂಧಗಳನ್ನು ಪಾಲಿಸುವಂತೆ ಮಾಡಲು,–

(i) ನಿರ್ದಿಷ್ಟ ರೀತಿಯಲ್ಲಿ ಮಾಹಿತಿ ಪಡೆಯಲು ಅವಕಾಶ ನೀಡುವಂತೆ ಕೋರಿದರೆ ಆ ರೀತಿಯಲ್ಲಿ ಮಾಹಿತಿ ಪಡೆಯಲು ಅವಕಾಶ ನೀಡುವುದು;

(ii) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ನೇಮಿಸುವುದು;

(iii) ಕೆಲವು ಮಾಹಿತಿಯನ್ನು ಅಥವಾ ಮಾಹಿತಿಯ ಪ್ರವರ್ಗಗಳನ್ನು ಪ್ರಕಟಿಸುವುದು;

(iv) ದಾಖಲೆಗಳ ನಿರ್ವಹಣೆಗೆ, ವ್ಯವಸ್ಥಾಪನೆಗೆ ಮತ್ತು ನಾಶಕ್ಕೆ ಸಂಬಂಧಿಸಿದಂತೆ ತಾನು ಅನುಸರಿಸುತ್ತಿರುವ ಪದ್ಧತಿಗಳಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡುವುದು;

(v) ಮಾಹಿತಿ ಹಕ್ಕಿನ ಬಗ್ಗೆ ತನ್ನ ಅಧಿಕಾರಿಗಳಿಗೆ ತರಬೇತಿ ಅವಕಾಶವನ್ನು ಹೆಚ್ಚಿಸುವುದು;

(vi) 4ನೇ ಪ್ರಕರಣದ (1)ನೇ ಉಪ ಪ್ರಕರಣದ (ಬಿ) ಖಂಡದ ಪ್ರಕಾರ ವಾರ್ಷಿಕ ವರದಿಯೊಂದನ್ನು ಅದಕ್ಕೆ ಒದಗಿಸುವುದು

– ಒಳಗೊಂಡಂತೆ ಅವಶ್ಯವಾಗಬಹುದಾದಂಥ ಯಾವುವೇ ಕ್ರಮಗಳನ್ನು ಕೈಗೊಳ್ಳಲು ಸಾರ್ವಜನಿಕ ಪ್ರಾಧಿಕಾರವನ್ನು ಅಗತ್ಯಪಡಿಸುವ;

(ಬಿ) ಫಿರ್ಯಾದಿಗೆ ಆದ ಯಾವುದೇ ನಷ್ಟ ಅಥವಾ ಇತರ ಹಾನಿಗಾಗಿ ನಷ್ಟ ಪರಿಹಾರ ನೀಡುವಂತೆ ಸಾರ್ವಜನಿಕ ಪ್ರಾಧಿಕಾರವನ್ನು ಅಗತ್ಯಪಡಿಸುವ;

(ಸಿ) ಈ ಅಧಿನಿಯಮದ ಅಡಿಯಲ್ಲಿ ಉಪಬಂಧಿಸಲಾದ ಯಾವುದೇ ಒಂದು ದಂಡನೆಯನ್ನು ವಿಧಿಸುವ;

(ಡಿ) ಅರ್ಜಿಯನ್ನು ತಿರಸ್ಕರಿಸುವುವ.

– ಅಧಿಕಾರವನ್ನು ಹೊಂದಿರುತ್ತದೆ.

(9) ಫಿರ್ಯಾದಿಗೆ ಮತ್ತು ಸಾರ್ವಜನಿಕ ಪ್ರಾಧಿಕಾರಕ್ಕೆ ಅಪೀಲು ಸಲ್ಲಿಸುವ ಹಕ್ಕು ಸೇರಿದಂತೆ ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ತನ್ನ ತೀರ್ಮಾನವನ್ನು ತಿಳಿಸತಕ್ಕದ್ದು.

(10) ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ನಿಯಮಿಸಬಹುದಾದಂಥ ಪ್ರಕ್ರಿಯೆಗನುಸಾರವಾಗಿ ಅಪೀಲಿನ ಬಗ್ಗೆ ತೀರ್ಮಾನ ತೆಗೆದುಕೊಳ್ಳತಕ್ಕದ್ದು.

**20. ದಂಡನೆಗಳು.–** (1) ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ ರಾಜ್ಯ ಮಾಹಿತಿ ಆಯೋಗವು ಯಾವುದೇ ದೂರು ಅಥವಾ ಅಪೀಲಿನ ಬಗ್ಗೆ ತೀರ್ಮಾನ ತೆಗೆದುಕೊಳ್ಳುವ ಸಮಯದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಯಾವುದೇ ಯುಕ್ತ ಕಾರಣವಿಲ್ಲದೆ ಮಾಹಿತಿ ಕೋರಿ ಸಲ್ಲಿಸಿದ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿದ್ದಾನೆಂದು ಅಥವಾ 7ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಸಮಯದೊಳಗೆ ಮಾಹಿತಿಯನ್ನು ಒದಗಿಸಿಲ್ಲವೆಂದು ಅಭಿಪ್ರಾಯಪಟ್ಟಲ್ಲಿ, ಅಥವಾ ಮಾಹಿತಿಗಾಗಿ ಕೋರಿಕೆಯನ್ನು ದುರುದ್ದೇಶದಿಂದ ನಿರಾಕರಿಸಿದ್ದಾನೆಂದು ಅಥವಾ ಗೊತ್ತಿದ್ದೂ ಸರಿಯಲ್ಲದ, ಅಪೂರ್ಣ ಅಥವಾ ದಾರಿತಪ್ಪಿಸುವ ಮಾಹಿತಿಗಳನ್ನು ನೀಡಿದ್ದಾನೆಂದು ಅಥವಾ ಯಾವ ಮಾಹಿತಿಯು ಕೋರಿಕೆಯ ವಿಷಯವಾಗಿತ್ತೋ ಆ ಮಾಹಿತಿಯನ್ನು ನಾಶಪಡಿಸಿದ್ದಾನೆಂದು ಅಥವಾ ಮಾಹಿತಿ ಒದಗಿಸುವುದಕ್ಕೆ ಯಾವುದೇ ರೀತಿಯಿಂದ ಅಡ್ಡಿಪಡಿಸಿದ್ದಾನೆಂದು ಅಭಿಪ್ರಾಯಪಟ್ಟಲ್ಲಿ, ಅರ್ಜಿಯನ್ನು ಸ್ವೀಕರಿಸಿದ ದಿನದವರೆಗೆ ಅಥವಾ ಮಾಹಿತಿಯನ್ನು ಒದಗಿಸಿದ ದಿನದವರೆಗೆ ಪ್ರತಿದಿನಕ್ಕೆ ಎರಡುನೂರ ಐವತ್ತು ರೂಪಾಯಿಗಳ ದಂಡವನ್ನು ವಿಧಿಸತಕ್ಕದ್ದು, ಆದರೆ, ಅಂಥ ದಂಡದ ಒಟ್ಟು ಮೊತ್ತವು ಇಪ್ಪತ್ತೈದು ಸಾವಿರ ರೂ.ಗಳನ್ನು ಮೀರತಕ್ಕದ್ದಲ್ಲ:

ಪರಂತು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಯಾವುದೇ ದಂಡನೆಯನ್ನು ವಿಧಿಸುವ ಮುನ್ನ, ಅವನಿಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಯುಕ್ತ ಅವಕಾಶವನ್ನು ನೀಡತಕ್ಕದ್ದು:

ಮತ್ತೂ ಪರಂತು, ತಾನು ಸಮುಚಿತವಾಗಿ ಮತ್ತು ಶ್ರದ್ಧೆಯಿಂದ ಕಾರ್ಯ ನಿರ್ವಹಿಸಿದ್ದೇನೆಂದು ರುಜುವಾತುಪಡಿಸುವ ಹೊಣೆಯು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಮೇಲಿರತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ ರಾಜ್ಯ ಮಾಹಿತಿ ಆಯೋಗವು ಯಾವುದೇ ದೂರಿನ ಅಥವಾ ಅಪೀಲಿನ ಬಗ್ಗೆ ತೀರ್ಮಾನ ತೆಗೆದುಕೊಳ್ಳುವ ಸಮಯದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಯಾವುದೇ ಯುಕ್ತ ಕಾರಣವಿಲ್ಲದೆ ಹಾಗೂ ಸತತವಾಗಿ, ಮಾಹಿತಿ ಕೋರಿ ಸಲ್ಲಿಸಿದ ಅರ್ಜಿಯನ್ನು ಸ್ವೀಕರಿಸಲು ವಿಫಲನಾಗಿದ್ದಾನೆಂದು ಅಥವಾ 7ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಸಮಯದೊಳಗೆ ಮಾಹಿತಿ ನೀಡಿಲ್ಲವೆಂದು ಅಥವಾ ದುರುದ್ದೇಶದಿಂದ ಮಾಹಿತಿಯ ಕೋರಿಕೆಯನ್ನು ನಿರಾಕರಿಸಿದ್ದಾನೆಂದು ಅಥವಾ ಗೊತ್ತಿದ್ದೂ ಸರಿಯಲ್ಲದ, ಅಪೂರ್ಣ ಅಥವಾ ದಾರಿ ತಪ್ಪಿಸುವ ಮಾಹಿತಿ ನೀಡಿದ್ದಾನೆಂದು ಅಥವಾ ಯಾವ ಮಾಹಿತಿಯು ಕೋರಿಕೆಯ ವಿಷಯವಾಗಿತ್ತೋ ಆ ಮಾಹಿತಿಯನ್ನು ನಾಶಪಡಿಸಿದ್ದಾನೆಂದು ಅಥವಾ ಮಾಹಿತಿ ಒದಗಿಸುವುದಕ್ಕೆ ಯಾವುದೇ ರೀತಿಯಿಂದ

ಅಡ್ಡಿಪಡಿಸಿದ್ದಾನೆಂದು ಅಭಿಪ್ರಾಯಪಟ್ಟರೆ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ವಿರುದ್ಧ ಅವನಿಗೆ ಅನ್ವಯವಾಗುವ ಸೇವಾ ನಿಯಮಗಳ ಅಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡತಕ್ಕದ್ದು.

## ಅಧ್ಯಾಯ --- VI

### ಸಂಕೀರ್ಣ

**21. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಅಡಿಯಲ್ಲಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ, ಯಾರೇ ವ್ಯಕ್ತಿಯ ವಿರುದ್ಧ ಯಾವುದೇ ದಾವೆಯನ್ನು, ಪ್ರಾಸಿಕ್ಯೂಷನನ್ನು ಅಥವಾ ಇತರ ಕಾನೂನು ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

**22. ಅಧಿನಿಯಮವು ಅಧ್ಯಾರೋಹಿ ಪರಿಣಾಮವನ್ನು ಹೊಂದಿರುವುದು.–** ಸರ್ಕಾರಿ ರಹಸ್ಯಗಳ ಅಧಿನಿಯಮ, 1923 (1923ರ 19)ರಲ್ಲಿ ಮತ್ತು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಅಥವಾ ಈ ಅಧಿನಿಯಮದ ಹೊರತಾಗಿ ಇತರ ಯಾವುದೇ ಕಾನೂನು ಬಲದಿಂದ ಪರಿಣಾಮಕಾರಿಯಾದ ಯಾವುದೇ ಲಿಖಿತದಲ್ಲಿ ಅದಕ್ಕೆ ಅಸಂಗತವಾದುದು ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಉಪಬಂಧಗಳು ಪರಿಣಾಮಕಾರಿಯಾಗಿರತಕ್ಕದ್ದು.

**23. ನ್ಯಾಯಾಲಯಗಳ ಅಧಿಕಾರ ವ್ಯಾಪ್ತಿಯ ಪ್ರತಿಷೇಧ.–** ಯಾವುದೇ ನ್ಯಾಯಾಲಯವೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಆದೇಶದ ಸಂಬಂಧದಲ್ಲಿ ಯಾವುದೇ ದಾವೆಯನ್ನು, ಅರ್ಜಿಯನ್ನು ಅಥವಾ ಇತರ ವ್ಯವಹರಣೆಯನ್ನು ಸ್ವೀಕರಿಸತಕ್ಕದ್ದಲ್ಲ ಮತ್ತು ಈ ಅಧಿನಿಯಮದ ಅಡಿಯಲ್ಲಿನ ಒಂದು ಅಪೀಲಿನ ಮೂಲಕವಲ್ಲದೆ ಅನ್ಯಥಾ ಯಾವುದೇ ಅಂಥ ಆದೇಶವನ್ನು ಪ್ರಶ್ನಿಸತಕ್ಕದ್ದಲ್ಲ.

**24. ಅಧಿನಿಯಮವು ಕೆಲವು ಸಂಸ್ಥೆಗಳಿಗೆ ಅನ್ವಯಿಸದಿರುವುದು.–** (1) ಈ ಅಧಿನಿಯಮದಲ್ಲಿ ಒಳಗೊಂಡಿರುವುದು ಯಾವುದೂ, ಎರಡನೇ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ, ಕೇಂದ್ರ ಸರ್ಕಾರವು ಸ್ಥಾಪಿಸಿ ನಡೆಸುತ್ತಿರುವ ಸಂಸ್ಥೆಗಳಾಗಿರುವ ಗುಪ್ತ ವಾರ್ತಾಸಂಸ್ಥೆ ಮತ್ತು ಭದ್ರತಾ ಸಂಸ್ಥೆಗಳಿಗೆ ಅಥವಾ ಅಂಥ ಸಂಸ್ಥೆಗಳು ಆ ಸರ್ಕಾರಕ್ಕೆ ಒದಗಿಸಿರುವ ಯಾವುವೇ ಮಾಹಿತಿಗಳಿಗೆ ಅನ್ವಯವಾಗತಕ್ಕದ್ದಲ್ಲ:

ಪರಂತು, ಭ್ರಷ್ಟಾಚಾರದ ಆಪಾದನೆಗಳಿಗೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಈ ಉಪ ಪ್ರಕರಣದ ಅಡಿಯಲ್ಲಿ ಹೊರತುಪಡಿಸತಕ್ಕದ್ದಲ್ಲ:

ಮತ್ತೂ ಪರಂತು, ಮಾನವ ಹಕ್ಕುಗಳ ಉಲ್ಲಂಘನೆಯ ಆಪಾದನೆಗಳಿಗೆ ಸಂಬಂಧಿಸಿದಂತೆ ಕೋರಿರುವ ಮಾಹಿತಿಯ ಸಂದರ್ಭದಲ್ಲಿ, ಕೇಂದ್ರ ಮಾಹಿತಿ ಆಯೋಗದ ಅನುಮೋದನೆ ಪಡೆದ ತರುವಾಯ ಮಾತ್ರವೇ ಆ ಮಾಹಿತಿಯನ್ನು ಒದಗಿಸತಕ್ಕದ್ದು ಮತ್ತು 7ನೇ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಕೋರಿಕೆಯನ್ನು ಸ್ವೀಕರಿಸಿದ ದಿನಾಂಕದಿಂದ ನಲವತ್ತೈದು ದಿನಗಳೊಳಗೆ ಅಂಥ ಮಾಹಿತಿಯನ್ನು ಒದಗಿಸತಕ್ಕದ್ದು.

(2) ಕೇಂದ್ರ ಸರ್ಕಾರವು, ಸರ್ಕಾರಿ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ, ಆ ಸರ್ಕಾರದಿಂದ ಸ್ಥಾಪಿಸಲಾದ ಯಾವುದೇ ಇತರ ಗುಪ್ತವಾರ್ತಾ ಸಂಸ್ಥೆಯನ್ನು ಅಥವಾ ಭದ್ರತಾ ಸಂಸ್ಥೆಯನ್ನು ಅನುಸೂಚಿಯಲ್ಲಿ ಸೇರಿಸಿ ಅಥವಾ ಅದರಲ್ಲಿ ಈಗಾಗಲೇ ನಿರ್ದಿಷ್ಟಪಡಿಸಿದ ಯಾವುದೇ ಸಂಸ್ಥೆಯನ್ನು ಅದರಿಂದ ಬಿಟ್ಟು ಅನುಸೂಚಿಯನ್ನು ತಿದ್ದುಪಡಿ ಮಾಡಬಹುದು ಮತ್ತು ಅಂಥ ಅಧಿಸೂಚನೆಯ ಪ್ರಕಟಣೆಯ ನಂತರ ಅಂಥ ಸಂಸ್ಥೆಯನ್ನು ಅನುಸೂಚಿಯಲ್ಲಿ ಸೇರಿಸಲಾಗಿದೆಯೆಂದು ಅಥವಾ ಸಂದರ್ಭಾನುಸಾರ, ಅದರಿಂದ ಬಿಟ್ಟುಬಿಡಲಾಗಿದೆಯೆಂದು ಭಾವಿಸತಕ್ಕದ್ದು.

(3) (2)ನೇ ಉಪ–ಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಅಧಿಸೂಚನೆಯನ್ನು ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

(4) ಈ ಅಧಿನಿಯಮದಲ್ಲಿ ಒಳಗೊಂಡಿರುವುದು ಯಾವುದೂ, ಸರ್ಕಾರವು ಸರ್ಕಾರಿ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದಂತೆ, ರಾಜ್ಯ ಸರ್ಕಾರವು ಸ್ಥಾಪಿಸಿದ ಸಂಸ್ಥೆಗಳಾಗಿರುವಂಥ ಗುಪ್ತ ವಾರ್ತಾಸಂಸ್ಥೆಗೆ ಮತ್ತು ಭದ್ರತಾ ಸಂಸ್ಥೆಗಳಿಗೆ ಅನ್ವಯಿಸತಕ್ಕದ್ದಲ್ಲ:

ಪರಂತು, ಭ್ರಷ್ಟಾಚಾರದ ಆಪಾದನೆಗಳಿಗೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಈ ಉಪಪ್ರಕರಣದ ಅಡಿಯಲ್ಲಿ ಹೊರತುಪಡಿಸತಕ್ಕದ್ದಲ್ಲ:

ಮತ್ತೂ ಪರಂತು, ಮಾನವ ಹಕ್ಕುಗಳ ಉಲ್ಲಂಘನೆಯ ಆಪಾದನೆಗಳ ಸಂಬಂಧದಲ್ಲಿ ಕೋರಿರುವ ಮಾಹಿತಿಯ ಸಂದರ್ಭದಲ್ಲಿ, ರಾಜ್ಯ ಮಾಹಿತಿ ಆಯೋಗದ ಅನುಮೋದನೆ ಪಡೆದ ತರುವಾಯ ಮಾತ್ರವೇ ಆ ಮಾಹಿತಿಯನ್ನು ಒದಗಿಸತಕ್ಕದ್ದು ಮತ್ತು 7ನೇ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಕೋರಿಕೆಯನ್ನು ಸ್ವೀಕರಿಸಿದ ದಿನಾಂಕದಿಂದ ನಲವತ್ತೈದು ದಿನಗಳ ಒಳಗೆ ಅಂಥ ಮಾಹಿತಿಯನ್ನು ಒದಗಿಸತಕ್ಕದ್ದು.

(5) (4)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಅಧಿಸೂಚನೆಯನ್ನು ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**25. ಮೇಲ್ವಿಚಾರಣೆ ಮಾಡುವುದು ಮತ್ತು ವರದಿ ಮಾಡುವುದು.–** (1) ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಪ್ರತಿಯೊಂದು ವರ್ಷದ ಮುಕ್ತಾಯದ ನಂತರ, ಸಾಧ್ಯವಾದಷ್ಟು ಬೇಗನೆ, ಆ ವರ್ಷದ ಅವಧಿಯಲ್ಲಿ ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸಿದ ಬಗ್ಗೆ ಒಂದು ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ಸಮುಚಿತ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ಪ್ರತಿಯೊಂದು ಸಚಿವಾಲಯವು ಅಥವಾ ಇಲಾಖೆಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ, ಈ ಪ್ರಕರಣದ ಅಡಿಯಲ್ಲಿ ವರದಿಯನ್ನು ಸಿದ್ಧಪಡಿಸಲು ಅಗತ್ಯಪಡಿಸಲಾದಂಥ ಮಾಹಿತಿಯನ್ನು ಸಂಗ್ರಹಿಸಿ, ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಒದಗಿಸತಕ್ಕದ್ದು ಮತ್ತು ಈ ಪ್ರಕರಣದ ಉದ್ದೇಶಗಳಿಗಾಗಿ ಮತ್ತು ಆ ಮಾಹಿತಿಯನ್ನು ಒದಗಿಸಲು ದಾಖಲೆಗಳನ್ನು ಇಟ್ಟುಕೊಳ್ಳುವುದಕ್ಕೆ ಸಂಬಂಧಿಸಿದ ಅಗತ್ಯತೆಗಳನ್ನು ಪಾಲಿಸತಕ್ಕದ್ದು.

(3) ವರದಿಯು ಯಾವ ವರ್ಷಕ್ಕೆ ಸಂಬಂಧಿಸಿದೆಯೋ ಆ ವರ್ಷಕ್ಕೆ ಸಂಬಂಧಿಸಿದ ಪ್ರತಿಯೊಂದು ವರದಿಯಲ್ಲಿ,–

(ಎ) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರಕ್ಕೆ ಸಲ್ಲಿಸಿದ ಕೋರಿಕೆಗಳ ಸಂಖ್ಯೆಯನ್ನು;

(ಬಿ) ಕೋರಿಕೆಗಳ ಅನುಸಾರವಾಗಿ ಅರ್ಜಿದಾರರಿಗೆ ದಾಖಲೆಗಳನ್ನು ಪಡೆಯುವ ಅವಕಾಶಕ್ಕೆ ಹಕ್ಕುಳ್ಳವರಾಗಿರಲಿಲ್ಲ ಎಂದು ತೆಗೆದುಕೊಂಡ ತೀರ್ಮಾನಗಳ ಸಂಖ್ಯೆ, ಈ ಅಧಿನಿಯಮದ ಯಾವ ಉಪಬಂಧಗಳ ಅಡಿಯಲ್ಲಿ ತೀರ್ಮಾನಗಳನ್ನು ಕೈಗೊಳ್ಳಲಾಗಿದೆಯೋ ಆ ಉಪಬಂಧಗಳನ್ನು ಮತ್ತು ಅಂಥ ಉಪಬಂಧಗಳನ್ನು ಎಷ್ಟು ಬಾರಿ ಆಧರಿಸಲಾಯಿತು ಎಂಬುದನ್ನು;

(ಸಿ) ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಪುನರವಲೋಕನಕ್ಕಾಗಿ ಸಲ್ಲಿಸಲಾದ ಅಪೀಲುಗಳ ಸಂಖ್ಯೆಯನ್ನು, ಅಪೀಲುಗಳ ಸ್ವರೂಪವನ್ನು ಮತ್ತು ಅಪೀಲುಗಳ ಫಲಿತಾಂಶವನ್ನು;

(ಡಿ) ಈ ಅಧಿನಿಯಮವನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾರೇ ಅಧಿಕಾರಿಯ ವಿರುದ್ಧ ಕೈಗೊಂಡ ಯಾವುದೇ ಶಿಸ್ತು ಕ್ರಮದ ವಿವರಗಳನ್ನು;

(ಇ) ಈ ಅಧಿನಿಯಮದ ಅಡಿಯಲ್ಲಿ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದಿಂದ ಸಂಗ್ರಹಿಸಲಾದ ಶುಲ್ಕಗಳ ಮೊತ್ತವನ್ನು;

(ಎಫ್) ಈ ಅಧಿನಿಯಮದ ಆಶಯ ಮತ್ತು ಉದ್ದೇಶಗಳನ್ನು ಜಾರಿಗೊಳಿಸಲು ಮತ್ತು ಕಾರ್ಯರೂಪಕ್ಕೆ ತರಲು ಸಾರ್ವಜನಿಕ ಪ್ರಾಧಿಕಾರಗಳು ಮಾಡಿದ ಪ್ರಯತ್ನವನ್ನು ಸೂಚಿಸುವ ಯಾವುವೇ ಸಂಗತಿಗಳನ್ನು;

(ಜಿ) ನಿರ್ದಿಷ್ಟ ಸಾರ್ವಜನಿಕ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ ಅಭಿವೃದ್ಧಿಗೆ, ಮೇಲ್ಪಾಟಿಗೆ, ಆಧುನೀಕರಣಕ್ಕೆ, ಸುಧಾರಣೆಗೆ ಮಾಡುವ ಶಿಫಾರಸುಗಳನ್ನು ಒಳಗೊಂಡಂತೆ ಸುಧಾರಣೆಗೆ ಸಂಬಂಧಿಸಿದ ಶಿಫಾರಸುಗಳು ಅಥವಾ ಈ ಅಧಿನಿಯಮಕ್ಕೆ ಅಥವಾ ಇತರ ಶಾಸನಕ್ಕೆ ಅಥವಾ ಸಾಮಾನ್ಯ ಕಾನೂನಿಗೆ ತಿದ್ದುಪಡಿ ಅಥವಾ ಮಾಹಿತಿ ಪಡೆಯುವ ಅವಕಾಶಕ್ಕೆ ಇರುವ ಹಕ್ಕನ್ನು ಜಾರಿಗೊಳಿಸುವುದಕ್ಕೆ ಸುಸಂಗತವಾದ ಯಾವುದೇ ಇತರ ವಿಷಯವನ್ನು

– ತಿಳಿಸತಕ್ಕದ್ದು.

(4) ಕೇಂದ್ರ ಸರ್ಕಾರವು ಅಥವಾ ಸಂದರ್ಭಾನುಸಾರ, ರಾಜ್ಯ ಸರ್ಕಾರವು ಪ್ರತಿಯೊಂದು ವರ್ಷ ಮುಕ್ತಾಯಗೊಂಡ ನಂತರ ಕಾರ್ಯಸಾಧ್ಯವಾದಷ್ಟು ಬೇಗನೆ, ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ವರದಿಯ ಒಂದು ಪ್ರತಿಯನ್ನು ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಅಥವಾ ಸಂದರ್ಭಾನುಸಾರ, ರಾಜ್ಯ ವಿಧಾನ ಮಂಡಲದಲ್ಲಿ, ಎರಡು ಸದನಗಳಿರುವಲ್ಲಿ ಪ್ರತಿಯೊಂದು ಸದನದ ಮುಂದೆ ಮತ್ತು ಒಂದೇ ಸದನವಿರುವಲ್ಲಿ ಆ ಸದನದ ಮುಂದೆ ಮಂಡಿಸುವಂತೆ ಮಾಡಬಹುದು.

(5) ಈ ಅಧಿನಿಯಮದ ಅಡಿಯಲ್ಲಿ ತನ್ನ ಪ್ರಕಾರ್ಯಗಳನ್ನು ನಿರ್ವಹಿಸುವುದಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಪ್ರಾಧಿಕಾರವು ಅನುಸರಿಸುತ್ತಿರುವ ಪದ್ಧತಿಯು ಈ ಅಧಿನಿಯಮದ ಉಪಬಂಧಗಳಿಗೆ ಅಥವಾ ಆಶಯಕ್ಕೆ ಅನುಗುಣವಾಗಿಲ್ಲವೆಂದು ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಕಂಡು ಬಂದಲ್ಲಿ, ತನ್ನ ಅಭಿಪ್ರಾಯದಲ್ಲಿ ಅದಕ್ಕೆ ಅನುಗುಣವಾಗಿರುವ ಅಂಥ ಪದ್ಧತಿಯನ್ನು ಉತ್ತೇಜಿಸುವುದಕ್ಕೆ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ನಿರ್ದಿಷ್ಟಪಡಿಸಿ ಪ್ರಾಧಿಕಾರಕ್ಕೆ ಶಿಫಾರಸು ಮಾಡಬಹುದು.

**26. ಸಮುಚಿತ ಸರ್ಕಾರವು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.–** (1) ಸಮುಚಿತ ಸರ್ಕಾರವು ಹಣಕಾಸು ಮತ್ತು ಇತರ ಸಂಪನ್ಮೂಲಗಳು ಲಭ್ಯವಿರುವಷ್ಟರ ಮಟ್ಟಿಗೆ,–

(ಎ) ಈ ಅಧಿನಿಯಮದ ಅಡಿಯಲ್ಲಿ ಉದ್ದೇಶಿಸಿದ ಹಕ್ಕುಗಳನ್ನು ಹೇಗೆ ಚಲಾಯಿಸಬೇಕೆಂಬ ಬಗ್ಗೆ ಸಾರ್ವಜನಿಕರಿಗೆ ಅದರಲ್ಲೂ ವಿಶೇಷವಾಗಿ ಅವಕಾಶ ವಂಚಿತ ಸಮುದಾಯಗಳ ತಿಳಿವಳಿಕೆ ಮಟ್ಟವನ್ನು ಹೆಚ್ಚಿಸಲು ಶೈಕ್ಷಣಿಕ ಕಾರ್ಯಕ್ರಮಗಳನ್ನು ರೂಪಿಸಬಹುದು ಮತ್ತು ಸಂಘಟಿಸಬಹುದು;

(ಬಿ) (ಎ) ಖಂಡದಲ್ಲಿ ಉಲ್ಲೇಖಿಸಿರುವ ಕಾರ್ಯಕ್ರಮಗಳನ್ನು ರೂಪಿಸುವುದರಲ್ಲಿ ಮತ್ತು ಸಂಘಟಿಸುವುದರಲ್ಲಿ ಭಾಗವಹಿಸಲು ಮತ್ತು ಅಂಥ ಕಾರ್ಯಕ್ರಮಗಳನ್ನು ಸ್ವತಃ ತಾವೇ ಕೈಗೊಳ್ಳಲು ಸಾರ್ವಜನಿಕ ಪ್ರಾಧಿಕಾರಗಳನ್ನು ಪ್ರೋತ್ಸಾಹಿಸಬಹುದು;

(ಸಿ) ಸಾರ್ವಜನಿಕ ಪ್ರಾಧಿಕಾರಗಳು ತಮ್ಮ ಕಾರ್ಯಚಟುವಟಿಕೆಗಳ ಬಗ್ಗೆ ನಿಖರವಾದ ಮಾಹಿತಿಯನ್ನು ಸಕಾಲದಲ್ಲಿ ಮತ್ತು ಪರಿಣಾಮಕಾರಿ ರೀತಿಯಲ್ಲಿ ಪ್ರಸಾರ ಮಾಡುವುದಕ್ಕೆ ಉತ್ತೇಜಿಸಬಹುದು; ಮತ್ತು

(ಡಿ) ಸಾರ್ವಜನಿಕ ಪ್ರಾಧಿಕಾರಗಳ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ತರಬೇತಿಗೊಳಿಸಬಹುದು ಮತ್ತು

ಸಾರ್ವಜನಿಕ ಪ್ರಾಧಿಕಾರಗಳು ತಮ್ಮ ಬಳಕೆಗಾಗಿ ಸುಸಂಗತ ತರಬೇತಿ ಪರಿಕರಗಳನ್ನು ತಾವೇ ತಯಾರಿಸಿಕೊಳ್ಳಬಹುದು.

(2) ಸಮುಚಿತ ಸರ್ಕಾರವು, ಈ ಅಧಿನಿಯಮವು ಪ್ರಾರಂಭವಾದಂದಿನಿಂದ ಹದಿನೆಂಟು ತಿಂಗಳುಗಳ ಒಳಗೆ, ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ಹಕ್ಕನ್ನು ಚಲಾಯಿಸಲು ಇಚ್ಛಿಸುವ ವ್ಯಕ್ತಿಯು ಯುಕ್ತವಾಗಿ ಅಗತ್ಯವಾಗಬಹುದಾದಂಥ ಮಾಹಿತಿಯನ್ನು ಸುಲಭವಾಗಿ ತಿಳಿಯುವ ರೂಪದಲ್ಲಿ ಮತ್ತು ರೀತಿಯಲ್ಲಿ ಅಂಥ ಮಾಹಿತಿಯನ್ನು ಒಳಗೊಂಡ ಮಾರ್ಗದರ್ಶಿ ಪುಸ್ತಿಕೆಯನ್ನು ತನ್ನ ಅಧಿಕೃತ ಭಾಷೆಯಲ್ಲಿ ಸಂಕಲಿಸತಕ್ಕದ್ದು.

(3) ಸಮುಚಿತ ಸರ್ಕಾರವು, ಅಗತ್ಯವೆನಿಸಿದಲ್ಲಿ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿರುವ ಮಾರ್ಗದರ್ಶಿ ಸೂತ್ರಗಳನ್ನು ನಿಯತ ಅಂತರಗಳಲ್ಲಿ ತಹಲ್‌ವರೆಗೆ ಸಿದ್ಧಪಡಿಸಿ ಪ್ರಕಟಿಸತಕ್ಕದ್ದು ಮತ್ತು (2)ನೇ ಉಪಪ್ರಕರಣದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ ಆ ದಿನದವರೆಗೆ ಅವುಗಳು,–

(ಎ) ಈ ಅಧಿನಿಯಮದ ಉದ್ದೇಶಗಳನ್ನು;

(ಬಿ) 5ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಂಚೆ ಮತ್ತು ಬೀದಿ ವಿಳಾಸ, ದೂರವಾಣಿ ಹಾಗೂ ಫ್ಯಾಕ್ಸ್ ಸಂಖ್ಯೆ ಹಾಗೂ ಲಭ್ಯವಿದ್ದಲ್ಲಿ ಇ–ಮೇಲ್ ವಿಳಾಸವನ್ನು;

(ಸಿ) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಮಾಹಿತಿ ಪಡೆಯಲು ಕೋರಿಕೆಯನ್ನು ಯಾವ ರೀತಿಯಲ್ಲಿ ಮತ್ತು ನಮೂನೆಯಲ್ಲಿ ಸಲ್ಲಿಸಬೇಕೋ ಆ ರೀತಿ ಮತ್ತು ನಮೂನೆಯನ್ನು;

(ಡಿ) ಈ ಅಧಿನಿಯಮದ ಅಡಿಯಲ್ಲಿ ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯಿಂದ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯಿಂದ ದೊರೆಯುವಂಥ ನೆರವು ಮತ್ತು ಆ ಅಧಿಕಾರಿಗಳ ಕರ್ತವ್ಯಗಳನ್ನು;

(ಇ) ಕೇಂದ್ರ ಮಾಹಿತಿ ಆಯೋಗದಿಂದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದಿಂದ ದೊರೆಯುವ ನೆರವನ್ನು;

(ಎಫ್) ಆಯೋಗಕ್ಕೆ ಅಪೀಲನ್ನು ಸಲ್ಲಿಸುವ ವಿಧಾನವನ್ನೂ ಒಳಗೊಂಡಂತೆ, ಈ ಅಧಿನಿಯಮದ ಮೂಲಕ ಪ್ರದತ್ತವಾದ ಅಥವಾ ವಿಧಿಸಲಾದ ಹಕ್ಕು ಅಥವಾ ಕರ್ತವ್ಯಕ್ಕೆ ಸಂಬಂಧಪಟ್ಟಂತೆ ಕೈಗೊಂಡ ಕ್ರಮಕ್ಕೆ ಅಥವಾ ಕ್ರಮ ಕೈಗೊಳ್ಳಲು ವಿಫಲವಾದುದಕ್ಕೆ ಸಂಬಂಧಿಸಿದಂತೆ ಕಾನೂನಿನಲ್ಲಿ ಲಭ್ಯವಿರುವ ಎಲ್ಲ ಪರಿಹಾರಗಳನ್ನು;

(ಜಿ) 4ನೇ ಪ್ರಕರಣಕ್ಕೆ ಅನುಸಾರವಾಗಿ ದಾಖಲೆಗಳ ಪ್ರವರ್ಗಗಳನ್ನು ಸ್ವಯಿಚ್ಛೆಯಿಂದ ಬಹಿರಂಗಪಡಿಸಲು ಅವಕಾಶ ಕಲ್ಪಿಸುವ ಉಪಬಂಧಗಳನ್ನು;

(ಎಚ್) ಮಾಹಿತಿಯನ್ನು ಪಡೆಯಲು ಸಲ್ಲಿಸಿದ ಕೋರಿಕೆಗಳಿಗೆ ಸಂಬಂಧಿಸಿದಂತೆ ಸಂದಾಯ ಮಾಡಬೇಕಾದ ಶುಲ್ಕದ ಬಗ್ಗೆ ಸಂಬಂಧಪಟ್ಟ ನೋಟೀಸುಗಳನ್ನು;

(ಐ) ಈ ಅಧಿನಿಯಮಕ್ಕೆ ಅನುಸಾರವಾಗಿ ಮಾಹಿತಿಯನ್ನು ಪಡೆಯುವುದಕ್ಕೆ ಸಂಬಂಧಿಸಿದಂತೆ ಮಾಡಲಾದ ಅಥವಾ ಹೊರಡಿಸಲಾದ ಹೆಚ್ಚುವರಿ ವಿನಿಯಮನಗಳನ್ನು ಅಥವಾ ಸುತ್ತೋಲೆಗಳನ್ನು

– ಒಳಗೊಂಡಿರತಕ್ಕದ್ದು.

(4) ಸಮುಚಿತ ಸರ್ಕಾರವು, ಅವಶ್ಯವೆನಿಸಿದರೆ ನಿಯತ ಅಂತರಗಳಲ್ಲಿ ಮಾರ್ಗದರ್ಶಿ ಸೂತ್ರಗಳನ್ನು ತಹಲ್‌ವರೆಗೆ ಸಿದ್ಧಪಡಿಸಿ ಪ್ರಕಟಿಸತಕ್ಕದ್ದು.

**27. ನಿಯಮಗಳನ್ನು ರಚಿಸಲು ಸಮುಚಿತ ಸರ್ಕಾರದ ಅಧಿಕಾರ.–** (1) ಸಮುಚಿತ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸಲು ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ, ಮತ್ತು ಈ ಹಿಂದೆ ಹೇಳಿದ ಅಧಿಕಾರದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ ಅಂಥ ನಿಯಮಗಳಲ್ಲಿ ಈ ಕೆಳಕಂಡ ಎಲ್ಲ ಅಥವಾ ಯಾವುವೇ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ,–

(ಎ) 4ನೇ ಪ್ರಕರಣದ (4)ನೇ ಉಪ ಪ್ರಕರಣದ ಅಡಿಯಲ್ಲಿ ಪ್ರಸಾರ ಮಾಡಬೇಕಾದ ವಿಷಯಗಳ ಮಾಧ್ಯಮ ವೆಚ್ಚ ಅಥವಾ ಮುದ್ರಣ ವೆಚ್ಚದ ಬೆಲೆ;

(ಬಿ) 6ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(ಸಿ) 7ನೇ ಪ್ರಕರಣದ (1) ಮತ್ತು (5)ನೇ ಉಪ ಪ್ರಕರಣಗಳ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(ಡಿ) 13ನೇ ಪ್ರಕರಣದ (6)ನೇ ಉಪಪ್ರಕರಣದ ಹಾಗು 16ನೇ ಪ್ರಕರಣದ (6)ನೇ ಉಪಪ್ರಕರಣದ ಮೇರೆಗೆ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡಬೇಕಾದ ಸಂಬಳ ಮತ್ತು ಭತ್ಯೆಗಳು ಹಾಗು ಅವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(ಇ) 19ನೇ ಪ್ರಕರಣದ (10)ನೇ ಉಪ ಪ್ರಕರಣದ ಅಡಿಯಲ್ಲಿ ಅಪೀಲುಗಳನ್ನು ತೀರ್ಮಾನಿಸುವಲ್ಲಿ ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ಅನುಸರಿಸಬೇಕಾದ ಪ್ರಕ್ರಿಯೆ; ಮತ್ತು

(ಎಫ್) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

**28. ನಿಯಮಗಳನ್ನು ರಚಿಸಲು ಸಕ್ಷಮ ಪ್ರಾಧಿಕಾರದ ಅಧಿಕಾರ.–** (1) ಸಕ್ಷಮ ಪ್ರಾಧಿಕಾರವು, ಸರ್ಕಾರಿ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸಲು ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಈ ಹಿಂದೆ ಹೇಳಿದ ಅಧಿಕಾರದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಅಂಥ ನಿಯಮಗಳಲ್ಲಿ ಈ ಕೆಳಕಂಡ ಎಲ್ಲ ಅಥವಾ ಯಾವುವೇ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) 4ನೇ ಪ್ರಕರಣದ (4)ನೇ ಉಪ ಪ್ರಕರಣದ ಅಡಿಯಲ್ಲಿ ಪ್ರಸಾರ ಮಾಡಬೇಕಾದ ವಿಷಯಗಳ ಮಾಧ್ಯಮ ವೆಚ್ಚ ಅಥವಾ ಮುದ್ರಣ ವೆಚ್ಚದ ಬೆಲೆ;

(ii) 6ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(iii) 7ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಸಂದಾಯ ಮಾಡಬೇಕಾದ ಶುಲ್ಕ;

ಮತ್ತು

(iv) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

**29. ನಿಯಮಗಳನ್ನು ಇಡುವುದು.–** (1) ಕೇಂದ್ರ ಸರ್ಕಾರವು, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದರಂತೆ ಅನುಕ್ರಮವಾಗಿ ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿವಸಗಳ ಅವಧಿಯವರೆಗೆ ಇಡತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನವು ಅಥವಾ ಒಂದಾದ ಮೇಲೊಂದರಂತೆ ಅನುಕ್ರಮವಾಗಿ ಬರುವ ಅಧಿವೇಶನಗಳ ನಿಕಟೋತ್ತರ ಅಧಿವೇಶನವು ಮುಕ್ತಾಯಗೊಳ್ಳುವುದಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರ, ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯೂ ಆ ನಿಯಮದ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವನ್ನುಂಟುಮಾಡತಕ್ಕದ್ದಲ್ಲ.

(2) ರಾಜ್ಯ ಸರ್ಕಾರವು ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ಅಧಿಸೂಚಿಸಿದ ತರುವಾಯ ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಮುಂದೆ ಇಡತಕ್ಕದ್ದು.

**30. ತೊಂದರೆಗಳನ್ನು ನಿವಾರಿಸಲು ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ಕೇಂದ್ರ ಸರ್ಕಾರವು, ಸರ್ಕಾರಿ ರಾಜಪತ್ರದಲ್ಲಿ ಪ್ರಕಟಿಸಿದ ಆದೇಶದ ಮೂಲಕ, ಅಂಥ ತೊಂದರೆ ನಿವಾರಿಸಲು ತನಗೆ ಅವಶ್ಯ ಅಥವಾ ವಿಹಿತ ಎಂದು ಕಂಡುಬರಬಹುದಾದಂತೆ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿರದಂಥ ಉಪಬಂಧಗಳನ್ನು ಕಲ್ಪಿಸಬಹುದು:

ಪರಂತು, ಅಂಥ ಯಾವುದೇ ಆದೇಶವನ್ನು ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳು ಮುಕ್ತಾಯವಾದ ತರುವಾಯ ಮಾಡತಕ್ಕದ್ದಲ್ಲ.

(2) ಈ ಪ್ರಕರಣದ ಮೇರೆಗೆ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಇಡತಕ್ಕದ್ದು.

**31. ನಿರಸನ.–** ಮಾಹಿತಿ ಸ್ವಾತಂತ್ರ್ಯ ಅಧಿನಿಯಮ, 2002 (2003ರ 5)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

## ಮೊದಲನೇ ಅನುಸೂಚಿ

[13 (3) ಮತ್ತು 16 (3) ಪ್ರಕರಣಗಳನ್ನು ನೋಡಿ]

**ಮುಖ್ಯ ಮಾಹಿತಿ ಆಯುಕ್ತ/ ಮಾಹಿತಿ ಆಯುಕ್ತ/ ರಾಜ್ಯ ಮುಖ್ಯ ಮಾಹಿತಿ ಆಯುಕ್ತ/ ರಾಜ್ಯ ಮಾಹಿತಿ ಆಯುಕ್ತರು ಕೈಗೊಳ್ಳಬೇಕಾದ ಪ್ರಮಾಣ ವಚನದ ಅಥವಾ ದೃಢೀಕರಣದ ನಮೂನೆ**

ಮುಖ್ಯ ಮಾಹಿತಿ ಆಯುಕ್ತ/ ಮಾಹಿತಿ ಆಯುಕ್ತ/ ರಾಜ್ಯ ಮುಖ್ಯ ಮಾಹಿತಿ ಆಯುಕ್ತ/ ರಾಜ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಂಡ ................................ ಎಂಬ ನಾನು, ಕಾನೂನಿನ ಮೂಲಕ ಸ್ಥಾಪಿತವಾದ ಸಂವಿಧಾನಕ್ಕೆ ನಿಜವಾದ ಶ್ರದ್ಧೆ ಮತ್ತು ನಿಷ್ಠೆಯನ್ನು ಹೊಂದಿರುತ್ತೇನೆಂದು, ಭಾರತದ ಅಖಂಡತೆಯನ್ನು ಮತ್ತು ಸಾರ್ವಭೌಮತ್ವವನ್ನು ಎತ್ತಿಹಿಡಿಯುತ್ತೇನೆಂದು, ನನ್ನ ಪದದ ಕರ್ತವ್ಯಗಳನ್ನು ಯಾವುದೇ ಭಯ ಅಥವಾ ಪಕ್ಷಪಾತವಿಲ್ಲದೆ, ರಾಗ ಅಥವಾ ದ್ವೇಷವಿಲ್ಲದೆ ವಿಧ್ಯುಕ್ತವಾಗಿ ಮತ್ತು ನಿಷ್ಠೆಯಿಂದ ಹಾಗೂ ನನ್ನ ಸಾಮರ್ಥ್ಯ, ತಿಳಿವಳಿಕೆ ಮತ್ತು ವಿವೇಚನೆ ಇರುವಷ್ಟರ ಮಟ್ಟಿಗೆ ನೆರವೇರಿಸುತ್ತೇನೆಂದು ಮತ್ತು

ಸಂವಿಧಾನವನ್ನು ಮತ್ತು ಕಾನೂನುಗಳನ್ನು ಎತ್ತಿಹಿಡಿಯುತ್ತೇನೆಂದು ದೇವರ ಹೆಸರಿನಲ್ಲಿ ಪ್ರಮಾಣ ಮಾಡುತ್ತೇನೆ/ ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ.

## ಎರಡನೆಯ ಅನುಸೂಚಿ

(24ನೇ ಪ್ರಕರಣ ನೋಡಿ)

### ಕೇಂದ್ರ ಸರ್ಕಾರವು ಸ್ಥಾಪಿಸಿದ ಗುಪ್ತ ವಾರ್ತಾ ಸಂಸ್ಥೆ ಮತ್ತು ಭದ್ರತಾ ಸಂಸ್ಥೆ

1. ಗುಪ್ತ ವಾರ್ತಾ ಸಂಸ್ಥೆ
2. ಸಚಿವ ಸಂಪುಟ ಸಚಿವಾಲಯದ ಸಂಶೋಧನೆ ಮತ್ತು ವಿಶ್ಲೇಷಣಾ ವಿಭಾಗ
3. ರಾಜಸ್ವ ಗುಪ್ತ ವಾರ್ತಾ ನಿರ್ದೇಶನಾಲಯ
4. ಕೇಂದ್ರ ಆರ್ಥಿಕ ಗುಪ್ತ ವಾರ್ತಾ ಸಂಸ್ಥೆ
5. ಜಾರಿ ನಿರ್ದೇಶನಾಲಯ
6. ಮಾದಕ ವಸ್ತುಗಳ ನಿಯಂತ್ರಣಾ ಸಂಸ್ಥೆ
7. ವಾಯುಯಾನ ಸಂಶೋಧನಾ ಕೇಂದ್ರ
8. ವಿಶೇಷ ಸರಹದ್ದು ದಳ
9. ಗಡಿ ಭದ್ರತಾ ದಳ
10. ಕೇಂದ್ರ ಮೀಸಲು ಪೋಲೀಸ್ ದಳ
11. ಇಂಡೋ – ಟಿಬೆಟಿಯನ್ ಗಡಿ ಪೊಲೀಸ್
12. ಕೇಂದ್ರ ಕೈಗಾರಿಕಾ ಭದ್ರತಾ ದಳ
13. ನ್ಯಾಷನಲ್ ಸೆಕ್ಯೂರಿಟಿ ಗಾರ್ಡ್
14. ಅಸ್ಸಾಮ್ ರೈಫಲ್ಸ್
15. ಸಶಸ್ತ್ರ ಸೀಮಾ ಬಲ

*16. ಆದಾಯ ತೆರಿಗೆ ಮಹಾನಿರ್ದೇಶಕ (ತನಿಖೆ)

*17. ರಾಷ್ಟ್ರೀಯ ತಾಂತ್ರಿಕ ಸಂಶೋಧನಾ ಸಂಸ್ಥೆ

*18. ಹಣಕಾಸು ಗುಪ್ತವಾರ್ತಾ ಘಟಕ, ಭಾರತ

19. ವಿಶೇಷ ರಕ್ಷಣ ದಳ
20. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ
21. ಗಡಿರಸ್ತೆ ಅಭಿವೃದ್ಧಿ ಮಂಡಲಿ

**22. ರಾಷ್ಟ್ರೀಯ ಭದ್ರತಾ ಪರಿಷತ್ ಸಚಿವಾಲಯ

* ಜಿಎಸ್ಆರ್ 235 (ಇ) ದಿನಾಂಕ 27ನೇ ಮಾರ್ಚ್ 2008ರ ತಿದ್ದುಪಡಿಯನ್ನು ಭಾರತ ರಾಜಪತ್ರದಲ್ಲಿ ಅಳವಡಿಸಲಾಗಿಲ್ಲ. ಪುಸ್ತಕ ರೂಪದಲ್ಲಿ ಅಳವಡಿಸಲಾಗಿದೆ.

** ಜಿಎಸ್ಆರ್ 726 (ಇ) ದಿನಾಂಕ 8ನೇ ಅಕ್ಟೋಬರ್ 2008ರ ತಿದ್ದುಪಡಿಯನ್ನು ಭಾರತ ರಾಜಪತ್ರದಲ್ಲಿ ಅಳವಡಿಸಲಾಗಿಲ್ಲ. ಪುಸ್ತಕ ರೂಪದಲ್ಲಿ ಅಳವಡಿಸಲಾಗಿದೆ.

* * *